ಸಂಪುಟ : 10 ಸಂಚಿಕೆ: 291 ಪುಟ : 4+2 ಬೆಲೆ: 3.00 ಶನಿವಾರ ಜನವರಿ 03 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 291 Pages : 4+2 Price : 3.00 Saturday January 03 2026 Gadag RNI No:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಅತ್ತಿಕಟ್ಟಿ ಗ್ರಾಮದಲ್ಲಿ ದುಷ್ಟ ಕೃತ್ಯಕ್ಕೆ 60 ಲಕ್ಷ ರೂ ಮೌಲ್ಯದ ಮೆಕ್ಕೆಜೋಳ ಭಸ್ಮ

## ಬೆಳೆಗೆ ಪೆಟ್ರೋಲ್ ಸುರಿದು ಬೆಂಕಿಯಿಟ್ಟ ದುಷ್ಕರ್ಮಿಗಳು!



> ಬೆಂಕಿ ಹಚ್ಚಿದ ಕಿಡಿಗೇಡಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು. ಹಗಲು-ರಾತ್ರಿ ಎನ್ನದೆ ಗೋವಿನ ಜೋಳ ಬೆಳೆದಿದ್ದು, 20 ಲಕ್ಷ ರೂ.ಗಳವರೆಗೆ ಸಾಲ ಮಾಡಿ ಬೆಳೆ ತೆಗೆದಿದ್ದೇವೆ. ಕೈಗೆ ಬಂದು ತುತ್ತು ಬಾಯಿಗೆ ಬರದಂತಾಗಿದೆ. ದಯವಿಟ್ಟು ಸರಕಾರದವರು ನಮಗೆ ಸಹಾಯ ಮಾಡಿ.
>
> **– ಸುನೀತಾ ಗೋಪಿ ಚವ್ಹಾಣ.**



**■ ವಿಜಯಸಾಕ್ಷಿ ಸುದ್ದಿ, ಡಂಬಳ**

ಡಂಬಳ ಹೋಬಳಿಯ ಕದಾಂಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅತ್ತಿಕಟ್ಟಿ ಗ್ರಾಮದ ರೈತರಾದ ಗೋಪಿ ಧನಸಿಂಗ ಚವ್ಹಾಣ ಹಾಗೂ ಗಣೇಶ ಧನಸಿಂಗ ಚವ್ಹಾಣ ಸಹೋದರರ ಬದುಕಿನ ಆಸರೆಯಾಗಿದ್ದ ಅಂದಾಜು 60 ಲಕ್ಷ ರೂ ಮೌಲ್ಯದ ನೂರಾರು ಕ್ವಿಂಟಾಲ್ ಗೋವಿನ ಜೋಳ ಬೆಂಕಿಗಾಹುತಿಯಾಗಿರುವ ದುರ್ಘಟನೆ ನಡೆದಿದೆ.

ಸಹೋದರರು ಗೋವಾದಲ್ಲಿ ಕೂಲಿ ಕೆಲಸ ಮಾಡಿ, ಪ್ರತಿ ಎಕರೆಗೆ 10-15 ಸಾವಿರ ರೂಗಳವರೆಗೆ ಲಾವಣಿ ಹಣ ನೀಡಿ ಸುಮಾರು 100 ಎಕರೆ ಭೂಮಿಯಲ್ಲಿ ಗೋವಿನ ಜೋಳವನ್ನು 20 ಲಕ್ಷದವರೆಗೆ ಬ್ಯಾಂಕ್ ಸಾಲ ಮತ್ತು ಕೈಸಾಲ ಮಾಡಿ ಹಗಲು-ರಾತ್ರಿ ಎನ್ನದೆ ಶ್ರಮಪಟ್ಟು ದುಡಿದು ಬೆಳೆಸಿದ್ದರು. ತಿಂಗಳುಗಟ್ಟಲೆ ಬೆವರು ಸುರಿಸಿ ಬೆಳೆದ ಬೆಳೆಯನ್ನು ಕೊಯ್ಲು ಮಾಡಿ ಸುಮಾರು 100 ಟ್ರ್ಯಾಕ್ಟರ್‌ಗಳಷ್ಟು ಫಸಲನ್ನು ಒಂದೇ ಸ್ಥಳದಲ್ಲಿ ರಾಶಿ ಹಾಕಿದ್ದರು. ಆದರೆ ಶುಕ್ರವಾರ ನಸುಕಿನ 4 ಗಂಟೆಯ ಸುಮಾರಿಗೆ ಕಿಡಿಗೇಡಿಗಳು ಗೋವಿನ ಜೋಳದ ರಾಶಿಗೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದಾರೆ ಎನ್ನಲಾಗಿದ್ದು, ಕ್ಷಣಾರ್ಧದಲ್ಲಿ ಬೆಂಕಿ ವ್ಯಾಪಿಸಿ ಸಂಪೂರ್ಣ ಫಸಲು ಸುಟ್ಟು ಭಸ್ಮವಾಗಿದೆ. ಈ ಘಟನೆಯಿಂದಾಗಿ ಅಂದಾಜು 60 ಲಕ್ಷ ರೂ ಮೊತ್ತದ ಗೋವಿನ ಜೋಳ ಸಂಪೂರ್ಣ ಸುಟ್ಟು ಕರಕಲಾಗಿದೆ.

ಬೆಂಕಿ ಅವಘಡದ ಸುದ್ದಿ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ರೈತರು ಹಾಗೂ ಗ್ರಾಮಸ್ಥರು ಬೆಂಕಿ ನಂದಿಸಲು ಪ್ರಯತ್ನಿಸಿದರೂ ಪ್ರಯೋಜನವಾಗಲಿಲ್ಲ. ಜೀವನೋಪಾಯಕ್ಕೆ ಅವಲಂಬಿಸಿದ್ದ ಬೆಳೆ ಕಣ್ಣೆದುರೇ ಸುಟ್ಟುಹೋಗಿರುವ ದೃಶ್ಯ ಕಂಡು ಸಹೋದರರು, ಕುಟುಂಬದ ಮಹಿಳೆಯರು ಕಣ್ಣೀರಿಡುತ್ತಿರುವ ದೃಶ್ಯ ಮನಕಲುಕುವಂತಿತ್ತು. ಈ ದುಷ್ಕೃತ್ಯದಿಂದ ರೈತರ ಶ್ರಮಕ್ಕೆ ಭಾರೀ ಹೊಡೆತವಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲನೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಹಾಗೂ ಸರ್ಕಾರದಿಂದ ಸೂಕ್ತ ಪರಿಹಾರ ನೀಡಬೇಕು ಎಂದು ಸುತ್ತಮುತ್ತಲಿನ ಗ್ರಾಮದ ರೈತರು, ರೈತ ಸಂಘಟನೆಗಳ ಪದಾಧಿಕಾರಿಗಳು ಆಗ್ರಹಿಸಿದರು.

ಸ್ಥಳಕ್ಕೆ ಮುಂಡರಗಿ ತಹಸೀಲ್ದಾರ ಯರಿಸ್ವಾಮಿ ಪಿ.ಎಸ್, ಡಿವಾಯ್‌ಎಸ್ಪಿ ಪ್ರಭುಗೌಡ ಡಿ.ಕೆ, ಸಿಪಿಐ ವಿಜಯಕುಮಾರ, ಕೃಷಿ ಅಧಿಕಾರಿ ಎಸ್.ಬಿ. ರಾಮೇನಳ್ಳಿ, ಕಂದಾಯ ಅಧಿಕಾರಿ ಪ್ರಭು ಬಾಗಲಿ, ಎಪಿಎಮ್‌ಸಿ ಕಾರ್ಯದರ್ಶಿ ರಾಘವೇಂದ್ರ, ಗ್ರಾಮ ಆಡಳಿತಾಧಿಕಾರಿ ಗೀತಾ ವಾಕಡೋತ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮುಂಡರಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ. ▸▸ 3ನೇ ಪುಟಕ್ಕೆ

## ಕ.ಸಾ.ಪ ದತ್ತಿ ಕಾರ್ಯಕ್ರಮ ಇಂದು

**■ ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಜ. 3ರಂದು ಸಂಜೆ 6.30 ಗಂಟೆಗೆ ಕಸಾಪ ಕಾರ್ಯಾಲಯದ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನದಲ್ಲಿ ಕಾಯಕರತ್ನ ಮೈಲಾರೆಪ್ಪ ಮೆಣಸಗಿ ಸ್ಮರಣಾರ್ಥ ದತ್ತಿ ಕಾರ್ಯಕ್ರಮದಲ್ಲಿ ಕವಿ ಕುಮಾರವ್ಯಾಸ ಜಯಂತಿ ಹಾಗೂ ಅಕ್ಷರದವ್ವ ಸಾವಿತ್ರಿಬಾಯಿ ಫುಲೆ ಜಯಂತಿ ಅಂಗವಾಗಿ ಉಪನ್ಯಾಸ ಹಾಗೂ ಸಂಗೀತ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಸಾವಿತ್ರಿಬಾಯಿ ಫುಲೆ ಅವರ ಕೊಡುಗೆ ಕುರಿತು ಕೆ.ಎಸ್.ಆರ್.ಡಿ.ಪಿ.ಆರ್ ಉಪನ್ಯಾಸಕಿ ಡಾ. ಚೈತ್ರಾ ವಿಶ್ವವಿದ್ಯಾಲಯ ಉಪನ್ಯಾಸ ನೀಡುವರು. ಅಧ್ಯಕ್ಷತೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ವಿವೇಕಾನಂದಗೌಡ ಪಾಟೀಲ ವಹಿಸುವರು.

ಮೈಲಾರೆಪ್ಪ ಮೆಣಸಗಿ ಅವರ ಸಂಸ್ಮರಣೆಯನ್ನು ಜಿಲ್ಲಾ ಕಸಾಪ ಕಾರ್ಯದರ್ಶಿ ಡಾ. ದತ್ತಪ್ರಸನ್ನ ಪಾಟೀಲ ಮಾಡುವರು. ಗದುಗಿನ ಭಾರತದ ಆಯ್ದ ಭಾಗದ ಗಮಕ ವಾಚನ ಹಾಗೂ ವ್ಯಾಖ್ಯಾನವನ್ನು ಐಶ್ವರ್ಯ ಹೂಲಿ ಹಾಗೂ ವಾಸುದೇವಾಚಾರ್ಯ ಹೂಲಿ ಅವರು ಮಾಡುವರು. ದತ್ತಿ ದಾನಿಗಳಾದ ಜಯದೇವ ಮೆಣಸಗಿ ಹಾಗೂ ಸಹೋದರರು ಉಪಸ್ಥಿತರಿರುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಸಾಹಿತಿಗಳು, ಪರಿಷತ್ತಿನ ಸದಸ್ಯರು ಭಾಗವಹಿಸಬೇಕೆಂದು ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ, ಡಿ.ಎಸ್. ಬಾಪುರಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

### ಜಾಗತಿಕ ಲಿಂಗಾಯತ ಮಹಾಸಭಾ ವತಿಯಿಂದ ಪ್ರಾಯಶ್ಚಿತ ದಿನಾಚರಣೆ

## ಆರೋಪಿಗಳಿಗೆ ಗರಿಷ್ಠ ಶಿಕ್ಷೆ ವಿಧಿಸಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಹುಬ್ಬಳ್ಳಿ ತಾಲೂಕಿನ ಇನಾಂವೀರಾಪುರದಲ್ಲಿ ನಡೆದ ಗರ್ಭಿಣಿ ಮಹಿಳೆ ಮಾನ್ಯಾ ಪಾಟೀಲ ಮರ್ಯಾದಾ ಹತ್ಯೆ ಖಂಡಿಸಿ ಶುಕ್ರವಾರ ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ ಜಾಗತಿಕ ಲಿಂಗಾಯತ ಮಹಾಸಭಾ, ಬಸವ ದಳ, ಲಿಂಗಾಯತ ಪ್ರಗತಿಶೀಲ ಸಂಘ, ದಲಿತ ಸಂಘಟನೆಗಳು ಹಾಗೂ ಪ್ರಗತಿಪರ ಸಂಘಟನೆಗಳ ಸಹೋಗದಲ್ಲಿ ಪ್ರಾಯಶ್ಚಿತ ದಿನ ಆಚರಿಸಲಾಯಿತು.

ಮರ್ಯಾದಾ ಹತ್ಯೆ ತಡೆಗೆ ಕಠಿಣ ಕಾನೂನು ಜಾರಿಗೊಳಿಸಬೇಕು ಎಂದು ಒತ್ತಾಯಿಸಿ ತಹಸೀಲ್ದಾರರ ಮೂಲಕ ಸರಕಾರಕ್ಕೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತೋಂಟ-ದ ಸಿದ್ಧರಾಮ ಸ್ವಾಮೀಜಿ, ಜಾತಿ ಮತ್ತು ಧರ್ಮದ ಹೆಸರಿನಲ್ಲಿ ನಡೆಯುವ ಇಂತಹ ಹತ್ಯೆಗಳು ಸಮಾಜಕ್ಕೆ ಕಪ್ಪುಚುಕ್ಕೆಯಿದ್ದಂತೆ. ಮರ್ಯಾದೆ ಹೆಸರಿನಲ್ಲಿ ಮನುಷ್ಯತ್ವವನ್ನು ಕೊಲೆ ಮಾಡುವುದು ಅತ್ಯಂತ ಅಮಾನವೀಯ. ಸರ್ಕಾರವು ಇಂತಹ ಘಟನೆಗಳನ್ನು ತಡೆಯಲು ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಭವಿಷ್ಯದಲ್ಲಿ ಇಂತಹ ಘಟನೆಗಳು ನಡೆಯದಂತೆ ನೋಡಿಕೊಳ್ಳುವುದು ಸರಕಾರ ಹೊಣೆ ಎಂದರು.



> ಜಾಗತಿಕ ಲಿಂಗಾಯತ ಮಹಾಸಭಾದ ಅಶೋಕ ಬರಗುಂಡಿ ಮಾತನಾಡಿ, ಗರ್ಭಿಣಿ ಮಾನ್ಯಾ ಪಾಟೀಲ ಬರ್ಬರ ಹತ್ಯೆಯು ನಾಗರಿಕ ಸಮಾಜ ತಲೆತಗ್ಗಿಸುವಂತೆ ಮಾಡಿದೆ. ಮರ್ಯಾದಾ ಹತ್ಯೆ ಹೆಸರಿನಲ್ಲಿ ನಡೆಯುವ ಇಂತಹ ಸಂವಿಧಾನ ವಿರೋಧಿ ಕೃತ್ಯಗಳನ್ನು ತಡೆಯಲು ಸರ್ಕಾರ ಕೂಡಲೇ ಕಠಿಣ ಕಾನೂನು ರೂಪಿಸಬೇಕು ಎಂದು ಒತ್ತಾಯಿಸಿದರು.

ಮಾನ್ಯಾ ಪಾಟೀಲ ಕೊಲೆ ಪ್ರಕರಣದ ಆರೋಪಿಗಳಿಗೆ ಮತ್ತು ಪ್ರಚೋದನೆ ನೀಡಿದವರಿಗೆ ವಿಳಂಬವಿಲ್ಲದೆ ಗರಿಷ್ಠ ಶಿಕ್ಷೆ ವಿಧಿಸಬೇಕು. ಮರ್ಯಾದಾ ಹತ್ಯೆಗಳನ್ನು ನಿರ್ಬಂಧಿಸಲು ಸುಪ್ರೀಂ ಕೋರ್ಟ್ ನಿರ್ದೇಶನದಂತೆ ಕಠಿಣವಾದ ವಿಶೇಷ ಕಾನೂನು ಜಾರಿಗೆ ತರಬೇಕು. ಅಂತರ್ಜಾತೀಯ ಮತ್ತು ಅಂತರ್ಧರ್ಮೀಯ ವಿವಾಹಿತರಿಗೆ ಸರ್ಕಾರವು ಪೊಲೀಸ್ ಇಲಾಖೆಯ ಮೂಲಕ ಸೂಕ್ತ ರಕ್ಷಣೆ ನೀಡಬೇಕು. ಅವರ ಸುರಕ್ಷತೆಯ ಬಗ್ಗೆ ಮಾಸಿಕ ಪ್ರಗತಿ ಪರಿಶೀಲನಾ ಸಭೆಗಳಲ್ಲಿ ಚರ್ಚಿಸಬೇಕು. ಶಾಲಾ ಪಠ್ಯಗಳಲ್ಲಿ ಜಾತಿ ವಿನಾಶಕಾರಿ ಮತ್ತು ಸಾಮರಸ್ಯದ ಚಿಂತನೆಗಳನ್ನು ಅಳವಡಿಸಬೇಕು. ವ್ಯಕ್ತಿಯ ಘನತೆ ಮತ್ತು ಬದುಕುವ ಹಕ್ಕಿನ ಕುರಿತು ಜಾಗೃತಿ ಮೂಡಿಸಬೇಕು ಎನ್ನುವ ಮನವಿ ಪತ್ರವನ್ನು ತಹಸೀಲ್ದಾರರ ಮೂಲಕ ಸರಕಾರಕ್ಕೆ ಸಲ್ಲಿಸಲಾಯಿತು.

ಬೈರನಹಟ್ಟಿ ದೊರೆಸ್ವಾಮಿ ವಿರಕ್ತಮಠದ ಶಾಂತಲಿಂಗ ಸ್ವಾಮೀಜಿ ಸೇರಿದಂತೆ ಹಲವು ಮಠಾಧೀಶರು ಸಭೆಯಲ್ಲಿ ಭಾಗವಹಿಸಿದ್ದರು. ಬುದ್ಧ, ಬಸವ, ಅಂಬೇಡ್ಕರ್ ಹಾಗೂ ಮಹಾತ್ಮ ಗಾಂಧಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಪ್ರಗತಿಪರ ಸಂಘಟನೆಗಳ ಸದಸ್ಯರು ಕ್ರಾಂತಿ ಗೀತೆಗಳನ್ನು ಹಾಡುವ ಮೂಲಕ ಮರ್ಯಾದಾ ಹತ್ಯೆಯನ್ನು ಖಂಡಿಸಿದರು.

ಮಾಜಿ ಶಾಸಕ ಡಿ.ಆರ್. ಪಾಟೀಲ, ಸಾಹಿತಿ ಬಸವರಾಜ ಸೂಳಿಭಾವಿ, ಶರೀಫ ಬೆಳೆಯಲಿ, ಮುತ್ತು ಬಿಳೆಯಲಿ, ಕಾಂಗ್ರೆಸ್ ಮುಖಂಡ ಅಶೋಕ ಮಂದಾಲಿ, ಮುತ್ತಣ್ಣ ಭರಡಿ, ನಗರಸಭೆ ಸದಸ್ಯ ಚಂದ್ರು ತಡಸದ, ಶೇಖಣ್ಣ ಕವಳಿಕಾಯಿ, ಕೆ.ಎಸ್. ಚಟ್ಟಿ, ವಾಸಣ್ಣ ಕುರುಡಗಿ, ಮಂಜುನಾಥ ಮುಳಗುಂದ, ಎಸ್.ಎನ್. ಬಳ್ಳಾರಿ, ವಿದ್ಯಾಧರ ದೊಡ್ಡಮನಿ ಸೇರಿದಂತೆ ಮುಖಂಡರು, ಮಹಿಳಾ ಸಂಘಟನೆಗಳ ಸದಸ್ಯರು ಭಾಗವಹಿಸಿದ್ದರು.

### ಏರ್ ರೈಫಲ್ ಶೂಟಿಂಗ್‌ನಲ್ಲಿ ರಾಷ್ಟ್ರಮಟ್ಟಕ್ಕೆ ಆಯ್ಕೆ

## ಸಾಕ್ಷಿ ಬಾಗಡೆಗೆ ಎಚ್.ಕೆ. ಪಾಟೀಲ ಅಭಿನಂದನೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ಕಂಜರಭಾಟ ಸಮುದಾಯದ ಸಾಕ್ಷಿ ಮಂಜುನಾಥ್ ಬಾಗಡೆ ಶಾಲಾ ಕ್ರೀಡಾಕೂಟದ ಏರ್ ರೈಫಲ್ ಶೂಟಿಂಗ್‌ನಲ್ಲಿ ರಾಜ್ಯಮಟ್ಟದಲ್ಲಿ ಪ್ರಥಮ ಸ್ಥಾನ ಗಳಿಸಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿ ಗದಗ ಜಿಲ್ಲೆಗೆ ಕೀರ್ತಿ ತಂದಿದ್ದಾಳೆ. ಸಾಧಕಿ ಸಾಕ್ಷಿ ಮಂಜುನಾಥ ಬಾಗಡೆ ಇವಳಿಗೆ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅಭಿನಂದಿಸಿ ರಾಷ್ಟ್ರಮಟ್ಟದಲ್ಲಿ ಜಯಶಾಲಿಯಾಗಿ ಗದಗ ಜಿಲ್ಲೆಗೆ ಕೀರ್ತಿ ತರುವಂತೆ ಶುಭ ಹಾರೈಸಿದರು.

ಸಾಧಕಿ ಸಾಕ್ಷಿ ಮಂಜುನಾಥ್ ಬಾಗಡೆ ಇವಳಿಗೆ ಗದಗ ಜಿಲ್ಲಾ ಯುವ ಕಾಂಗ್ರೆಸ್‌ನ ಕೃಷ್ಣಗೌಡ ಪಾಟೀಲ, ಸುರೇಶ್ ಕಟ್ಟಿಮನಿ, ಮೋಹನ್ ಕಟ್ಟಿಮನಿ, ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ರವೀಂದ್ರ ಎಸ್ ಹಾಗೂ ಎನ್.ಆರ್. ನಿಡಗುಂದಿ, ಜೆ.ಬಿ. ಅಣ್ಣಿಗೇರಿ ರಾಜಪ್ಪ, ದೈಹಿಕ ಶಿಕ್ಷಕ ಥಾಮಸ್, ಶಾಲಾ ಸಿಬ್ಬಂದಿಗಳು ಹಾಗೂ ತರಬೇತಿದಾರರ ಬಸವರಾಜ ಹೊಂಬಾಳಿ, ಡಾ. ಅನಿಲ ತಮ್ಮಣ್ಣವರ ಹರಣಶಿಕಾರಿ ಸಮುದಾಯದ ಎಲ್ಲ ಮುಖಂಡರು ಶುಭ ಹಾರೈಸಿದ್ದಾರೆ.

ಈ ಸಂದರ್ಭದಲ್ಲಿ ವೀರಾಪುರ್, ವೈ.ಜಿ. ಗಡಾದ, ಅಶೋಕ ಬಾಗಡೆ, ಮನೋಜ್, ದೀಪಕ, ಗಣೇಶ್, ರಮೇಶ್, ಸಂಜೀವ, ವಿನೋದ, ಮಹೇಶ್, ಲಖನ, ಬಾದಲ್, ಕಿರಣ್, ವಿಶ್ವಾಸ, ಮಹೇಶ್ ಪಿ.ಎನ್, ರವಿ ಕಟ್ಟಿಮನಿ, ಸುರೇಶ್ ನವಲೇಕರ್, ರೋಹಿತ್, ಮುಖೇಶ, ರಾಕೇಶ್, ಕುಶಾಲ್, ಸಂತೋಷ್, ಸಚಿನ್, ರಾಹುಲ್, ಕರಣ, ಕಾರ್ತಿಕ್, ರಾಧಾ, ರೋಹಿತ್ ವಿ, ಅರ್ಚನಾ ಬಾಗಡೆ, ತನುಷ, ಅವಿರ, ನಿಹಾಲ್ ಮುಂತಾದವರಿದ್ದರು.

### 37ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಹೆ ಕಾರ್ಯಕ್ರಮ ಉದ್ಘಾಟಿಸಿದ ಸಿ.ಎಸ್. ಶಿವನಗೌಡ್ರ

## ರಸ್ತೆ ಸುರಕ್ಷತಾ ನಿಯಮಗಳನ್ನು ಉಲ್ಲಂಘಿಸದಿರಿ



> ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಹಾಂತೇಶ ಸಜ್ಜನರ ಮಾತನಾಡಿ, ರಸ್ತೆ ಸುರಕ್ಷತಾ ನಿಯಮಗಳ ಕುರಿತು ಶಾಲಾ-ಕಾಲೇಜುಗಳಲ್ಲಿ ಅಲ್ಲದೇ ನಮ್ಮ ನೆರೆ-ಹೊರೆಯವರಿಗೂ ಜಾಗೃತಿ ಮೂಡಿಸಬೇಕು. ವಾಹನ ಚಾಲನಾ ಸಮಯದಲ್ಲಿ ಹೆಲ್ಮೆಟ್ ಧರಿಸುವುದು ಕಡ್ಡಾಯವಾಗಿದ್ದು, ಯಾರೂ ಈ ಕುರಿತು ನಿರ್ಲಕ್ಷ್ಯ ತೋರಬಾರದು. ರಾಷ್ಟ್ರದ ಅಭಿವೃದ್ಧಿಗಾಗಿ ರಸ್ತೆ ಸುರಕ್ಷತಾ ನಿಯಮ ಪಾಲಿಸಿ ವಾಹನ ಚಲಾಯಿಸಬೇಕು. ವಾಹನ ಚಾಲಕರ ನಿರ್ಲಕ್ಷ್ಯ ಹಾಗೂ ಒಂದು ಕ್ಷಣದ ಆವೇಶದಿಂದ ಅಪಘಾತಗಳು ಸಂಭವಿಸಿ ಅವರ ಜೀವನವೇ ಸಂಕಷ್ಟಮಯವಾಗುತ್ತದೆ. ಪಾಲಕರು ತಮ್ಮ 18 ವರ್ಷದೊಳಗಿನ ಮಕ್ಕಳಿಗೆ ವಾಹನ ಚಾಲನೆ ಮಾಡಲು ಅನುಮತಿಸಬಾರದು. ಈ ಬಗ್ಗೆ ಜಾಗೃತಿ ವಹಿಸುವುದು ಮುಖ್ಯವಾಗಿದೆ ಎಂದರು.

**■ ವಿಜಯಸಾಕ್ಷಿ ಸುದ್ದಿ, ಗದಗ**

ರಸ್ತೆ ಅಪಘಾತಗಳನ್ನು ತಡೆಗಟ್ಟುವದು, ಅಪಘಾತಗಳ ಪ್ರಮಾಣ ಕಡಿಮೆ ಮಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ರಸ್ತೆ ಸುರಕ್ಷತಾ ನಿಯಮಗಳ ಕುರಿತು ಜಾಗೃತಿ ಮೂಡಿಸುವುದು ಎಲ್ಲರ ಕರ್ತವ್ಯವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಶುಕ್ರವಾರ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಇವರ ಸಹಯೋಗದಲ್ಲಿ 37ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಹೆ-2026ನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಸ್ತೆ ಸುರಕ್ಷತಾ ನಿಯಮಗಳ ಬಗ್ಗೆ ಅರಿವು ಮೂಡಿಸುವುದು ಎಲ್ಲ ಇಲಾಖೆಗಳ ಕರ್ತವ್ಯವಾಗಿದೆ. ಜ. 1ರಿಂದ 31ರವರೆಗೆ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಹೆಯನ್ನು ಆಚರಿಸಲಾಗುತ್ತಿದೆ. ಶಾಲಾ-ಕಾಲೇಜುಗಳಲ್ಲಿಯೂ ಸಹ ರಸ್ತೆ ಸುರಕ್ಷತಾ ನಿಯಮಗಳ ಕುರಿತು ಕಾರ್ಯಕ್ರಮ ಕೈಗೊಳ್ಳಲು ತೀರ್ಮಾನಿಸಲಾಗಿದೆ. ರಸ್ತೆಗಳಲ್ಲಿ ಅಪಘಾತಗಳು ಸಂಭವಿಸಲು ಜನರಲ್ಲಿ ತಿಳುವಳಿಕೆ ಇಲ್ಲದಿರುವುದು ಹಾಗೂ ರಸ್ತೆ ಸುರಕ್ಷತಾ ನಿಯಮಗಳ ಉಲ್ಲಂಘನೆಯೇ ಮುಖ್ಯ ಕಾರಣವಾಗಿದೆ. 18 ವರ್ಷದೊಳಗಿನ ಮಕ್ಕಳು ವಾಹನ ಚಲಾಯಿಸುವುದು ಹಾಗೂ ವಾಹನದ ಇನ್ಸುರೆನ್ಸ್ ಇಲ್ಲದೇ ವಾಹನ ಚಾಲನೆ ಮಾಡುವುದು, ಪೊಲೀಸರ ಕಣ್ತಪ್ಪಿಸಿ ರಸ್ತೆ ಸುರಕ್ಷತಾ ನಿಯಮಗಳ ಉಲ್ಲಂಘನೆ ಮಾಡುವುದರಿಂದ ರಸ್ತೆ ಅಪಘಾತ ಸಂಭವಿಸಿ ಜನರು ತಮ್ಮ ಅಮೂಲ್ಯ ಜೀವನವನ್ನು ಕಳೆದುಕೊಳ್ಳುತ್ತಿದ್ದಾರೆ ಎಂದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಆರ್.ಜಿ. ಕಲ್ಲೂರ ಹಾಗೂ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ ಮಾತನಾಡಿ, ರಸ್ತೆಯಲ್ಲಿನ ವೇಗ ಮಿತಿಗೊಳಿಸಿ ಅಪಘಾತ ತಪ್ಪಿಸಲು ರಸ್ತೆಗಳಲ್ಲಿ ಹಂಪ್‌ಗಳನ್ನು ನಿರ್ಮಿಸಿರುತ್ತಾರೆ. ಆದರೆ ವಾಹನ ಸವಾರರು ಆ ಹಂಪ್‌ಗಳನ್ನು ▸▸ 3ನೇ ಪುಟಕ್ಕೆ

# ಸಿ.ಸಿ ರಸ್ತೆ ಕಾಮಗಾರಿಗೆ ಭೂಮಿಪೂಜೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಸಭೆಯ ವಾರ್ಡ್ ನಂ. 12ರ ಜೆ.ಟಿ. ಕಾಲೇಜ್ ಮುಂಭಾಗದ ಸತ್ಲಾಪೂರ ಡಂಬಳರವರ ಮನೆಯ ಮುಂಭಾಗದಲ್ಲಿ ಸಿ.ಸಿ. ರಸ್ತೆ ಕಾಮಗಾರಿಯ ಭೂಮಿಪೂಜೆಯನ್ನು ನಗರಸಭೆ ಸದಸ್ಯರಾದ ವಿಜಯಲಕ್ಷ್ಮೀ ಶಶಿಧರ ದಿಂಡೂರ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ವಾರ್ಡಿನಲ್ಲಿ ವಿವಿಧ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಈಗಾಗಲೇ ಕೈಲಾಸ ವರಸಿದ್ಧಿ ದೇವಸ್ಥಾನದ ಎದುರು ಬೋರ್‌ವೆಲ್ ಕೊರೆಯಿಸಿ ವಾರ್ಡಿನಲ್ಲಿ ಮನೆ ಮನೆಗೆ ನೀರಿನ ಪೈಪ್‌ಲೈನ್ ಜೋಡಣೆ ಕಾಮಗಾರಿ ಕೈಗೊಳ್ಳಲಾಗಿದೆ. ಚರಂಡಿ, ಬೀದಿ ದೀಪ, ವಾರ್ಡ್‌ನಲ್ಲಿ ಸ್ವಚ್ಛತೆಯ ಬಗ್ಗೆ ವಿಶೇಷ ಗಮನ ಹರಿಸಲಾಗುತ್ತಿದ್ದು, ವಾರ್ಡಿನ ಯಾವುದೇ ಸಮಸ್ಯೆಗೂ ಕೂಡಲೇ ಸ್ಪಂದಿಸುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಛಾಯಾ ಜೋಶಿ, ಮಲ್ಲಿಕಾರ್ಜುನ ಡಂಬಳ, ಸತೀಶ ಸತ್ಲಾಪುರ, ಮಂಜುನಾಥ ಡಂಬಳ, ಎಸ್.ಎಫ್. ತಿಮ್ಮನಗೌಡರ, ರಾಜೇಶ ವೇರ್ಣೇಕರ, ಬಾಬಣ್ಣ, ಶ್ವೇತಾ ವೇರ್ಣೇಕರ, ಅನಸೂಯಾ ಚಿಂತಾಕುಲ, ಅನ್ನಪೂರ್ಣ ಹಿರೇಮಠ ಸೇರಿದಂತೆ ವಾರ್ಡಿನ ನಿವಾಸಿಗಳು ಉಪಸ್ಥಿತರಿದ್ದರು.

**ಶ್ರೀ ಬಾದಾಮಿ ಬನಶಂಕರಿ ದೇವಿಯ ವೈಭವದ ಜಾತ್ರಾ ಮಹೋತ್ಸವದ ನಿಮಿತ್ತ ಲೇಖನ**

# ನೋಡಬನ್ನಿ ಬನಶಂಕರಿ ತಾಯಿಯ ಜಾತ್ರೆ

ಬಾಗಲಕೋಟೆ ಜಿಲ್ಲೆಯ ಬದಾಮಿ ತಾಲೂಕಿನ ಬನಶಂಕರಿ ದೇವಿಯ ಜಾತ್ರೆ ಉತ್ತರ ಕರ್ನಾಟಕದ ಜಾತ್ರೆಗಳಲ್ಲಿಯೇ ಪ್ರಸಿದ್ಧವಾಗಿದೆ. ಬಾದಾಮಿ ಚಾಲುಕ್ಯ ಅರಸರ ನೆಚ್ಚಿನ ದೇವತೆ ಶ್ರೀ ಬನಶಂಕರಿ ದೇವಿ ಆಗಿದ್ದಳು. ಈ ಜಾತ್ರೆಯು ಪ್ರತಿ ವರ್ಷ ಬನದ ಹುಣ್ಣಿಮೆಯ ದಿವಸ ಜನವರಿ ತಿಂಗಳಲ್ಲಿ ಬರುತ್ತದೆ. ಇದರ ರಥೋತ್ಸವವು ಈ ವರ್ಷ ಜ. 03ರಂದು ಜರುಗಲಿದೆ.

ಕರ್ನಾಟಕದ ವಿವಿಧ ಜಿಲ್ಲೆಗಳಿಂದ ಭಕ್ತಾದಿಗಳು ಈ ಬನಶಂಕರಿ ದೇವಿಯ ಜಾತ್ರೆಗೆ ಬರುವರು. ದೇವಿ ಮಂದಿರ, ಸರಸ್ವತಿ ಹಳ್ಳದ ಹಾಗೂ ಬನ ತೋಟಗಳ ಮಧ್ಯದ ಭಾಗದಲ್ಲಿ ಬನದೇವಿಯು ನೆಲೆ ನಿಂತಿದ್ದಾಳೆ.

ಬಾಳೆ, ತೆಂಗು, ಎಲೆ ಬಳ್ಳಿ, ಅನೇಕ ಸಸ್ಯಗಳೊಂದಿಗೆ ಈ ಪ್ರದೇಶವು ಕಂಗೊಳಿಸುತ್ತಿದೆ. ಈ ಮೊದಲು ಬಿಜಾಪೂರ ಜಿಲ್ಲೆಗೆ ಒಳಪಡುತ್ತಿದ್ದು, ನಂತರ ಬಾಗಲಕೋಟ ಹೊಸ ಜಿಲ್ಲೆ ಆದ ನಂತರ ಇದರ ಆಡಳಿತಕ್ಕೆ ಬಂದಿದೆ.

ಜಾತ್ರೆಯು ಬನದ ಹುಣ್ಣಿಮೆಯ ದಿವಸ ಪ್ರಾರಂಭವಾಗಿ ಬರುವ ಹುಣ್ಣಿಮೆಯ ತನಕ ಜರಗುತ್ತದೆ. ಬನಶಂಕರಿ ದೇವಿ ದೇವಸ್ಥಾನಕ್ಕೆ ದೀಪಾಲಂಕಾರ, ಹೂವಿನ ಶೃಂಗಾರ




ಮಾಡಿರುತ್ತಾರೆ. ಬಾದಾಮಿ ಕಡೆಯಿಂದ ಬರುವ ರಸ್ತೆಗೆ ಎಡ ಬದಿ ಹಾಗೂ ಬಲ ಬದಿಯ ಪ್ರಾರಂಭದಲ್ಲಿ ಕಟ್ಟಿಗೆ ಎಳೆ ಅಡ್ಡೆ, ಚಿತ್ತಾರದ ಬಾಗಿಲು, ಕಿಡಕಿ, ಸಂದಕ, ಗಣಪತಿಯ ಬಾಗಿಲು ಮಾರುವ ಅಡ್ಡೆ, ಬಿದಿರು ಮಾರುವ ಮ್ಯಾದರ ಅಡ್ಡೆ, ಮಾವಿನ ಬೇವಿನ ಹಲಗೆ ಮಾರುವ ಅಡ್ಡೆ, ನಾಟಕ ಕಂಪನಿಗಳ ಸಾಲು, ಅದರ ಪಕ್ಕ ಸೋಡಾದ ಅಂಗಡಿಗಳು, ಚಹಾದ ಅಂಗಡಿಗಳು, ಕಬ್ಬಿನ ಅಂಗಡಿ, ರೈತರ ಸಲಕರಣೆ, ಮನೆಯ ಸಾಮಾನು, ಬಟ್ಟೆ ಅಂಗಡಿಗಳ ಸಾಲು ಮತ್ತು ಒಂದು ಸಾಲು ಕಿರಾಣಿ ಅಂಗಡಿ, ಬಳೆ ಅಂಗಡಿಗಳ ಸಾಲು, ಮಧ್ಯದಲ್ಲಿ ಸಂಚಾರಿ ಪೊಲೀಸ್ ಠಾಣೆ, ಮತ್ತು ಮಿಠಾಯಿ ಅಂಗಡಿ ಸಾಲು, ಅಮೀನಗಡದ ಗೋಕಾಕದ ಕರದಂಟನ ಅಂಗಡಿ, ಖಾನಾವಳಿಗಳು, ಫೋಟೊ ಅಂಗಡಿಗಳು, ಸಿನಿಮಾ ಟೆಂಟ್‌ಗಳು, ಮೋಜಿನ ಆಟಗಳ ಅಂಗಡಿಗಳು ಗುಡಿಯ ಮುಂದೆ ಹೊಂಡ ಹೊಂಡದ ಸುತ್ತ ಕುಂಕುಮ ವಿಭೂತಿ ಅಂಗಡಿಗಳು, ಸರ್ಕಸ್ ಕಂಪನಿ ಹಾಗೂ ಹೊಸ ಹೊಸ ಕಂಪನಿ ಪ್ರಚಾರಕ ಅಂಗಡಿಗಳು ಸಾಲು ಹಚ್ಚುತ್ತವೆ.

ಜಾತ್ರೆಗೆ ವಿವಿಧ ನಾಟಕ ಕಂಪನಿ, ಕಿರುತೆರೆ ನಟ-ನಟಿಯರು ಬಂದು ನಡೆಸುವ ನಾಟಕ ಪ್ರದರ್ಶನ ನೋಡುವುದೇ ಒಂದು ಖುಷಿ. ಜಾತ್ರೆಗೆ ಎತ್ತಿನ ಗಾಡಿ, ರಿಕ್ಷಾ, ಮೋಟಾರು ಸೈಕಲ್, ಕಾರು, ಬಸ್ ಸಂಚಾರದೊಂದಿಗೆ ಹಗಲು-ರಾತ್ರಿ ಬನಶಂಕರಿ ತಾಯಿಯ ದರುಶನಕ್ಕೆ ಭಕ್ತರು ಬರುತ್ತಾರೆ.

ಜೀವನದಲ್ಲಿ ಒಮ್ಮೆಯಾದರೂ ಈ ಜಾತ್ರೆ ನೋಡವ ಭಾಗ್ಯ ನಿಮ್ಮದಾಗಬೇಕು. ಜಾತ್ರೆಯ ದಿವಸ ಮಾಡಲಗೇರಿ ಗ್ರಾಮದಿಂದ ತೇರಿನ ಹಗ್ಗವು ಕೋಲಾರದ ಹಳ್ಳಿ ಬಂಡಿಯಲ್ಲಿ ಸಿಂಗರಿಸಿಕೊಂಡು ಜನರು ಹುರುಪಿನಿಂದ ಬರುತ್ತಾರೆ. ದಾರಿಯುದ್ದಕ್ಕೂ ಜಯಘೋಷ ಮಾಡುತ್ತಾ ಮಧ್ಯಾಹ್ನ ಶ್ರೀ ಬನಶಂಕರಿ ದೇವಸ್ಥಾನಕ್ಕೆ ಬರುತ್ತಾರೆ.

ತೇರಿನ ಹಗ್ಗ ತೇರಿಗೆ ಕಟ್ಟಿ ಪೂಜೆ ಮಾಡಿ ಸಂಭ್ರಮದಿಂದ ಪುರೋಹಿತರು ಹಾಗೂ ಜಾತ್ರಾ ಕಮಿಟಿಯವರು ಜನಪ್ರತಿನಿಧಿಗಳ ಅಪಾರ ಭಕ್ತ ಸಮೂಹದಲ್ಲಿ ಸಾಯಂಕಾಲ 5 ಗಂಟೆಗೆ ರಥೋತ್ಸವ ಜರುಗುವದು. ನಂತರ ಎಲ್ಲರೂ ದೇವಿ ದರ್ಶನ ಪಡೆದು ಎಲ್ಲಾ ಕಾರ್ಯಕ್ರಮಗಳಲ್ಲಿ ಭಾಗಿಯಾಗುತ್ತಾರೆ.

ಮತ್ತೇಕೆ ತಡ, ಈ ಬಾರಿಯ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು, ಜಾತ್ರೆಯ ಸೊಬಗನ್ನು ನೀವೂ ಕಣ್ತುಂಬಿಕೊಳ್ಳಿ.

**– ಎಸ್.ಎಫ್. ಜಾಲಿಹಾಳ.**
ಗದಗ.

# ಧನುರ್ಮಾಸದ ಆಚರಣೆ, ಅದರ ಮಹತ್ವ

ವರ್ಷದ ಕೊನೆಯ ತಿಂಗಳು ಕೊರೆಯುವ ಚಳಿಯಲ್ಲಿಯೇ ಧನುರ್ಮಾಸದ ಆರಂಭವಾಗಿದೆ. ಈ ವರ್ಷ ಧನುರ್ಮಾಸವು ಡಿಸೆಂಬರ್ 16ರಿಂದ ಪ್ರಾರಂಭವಾಗಿದ್ದು, 2026ರ ಜನೇವರಿ 14ರಂದು ಪೂರ್ಣಗೊಳ್ಳುತ್ತದೆ. ಮುಂಜಾನೆ ಬ್ರಾಹ್ಮೀ ಮುಹೂರ್ತದಲ್ಲಿ ಅಂದರೆ ನಸುಕಿನ 4.30ಕ್ಕೆ ಎದ್ದು, ನಿತ್ಯಕರ್ಮಗಳನ್ನು ಮುಗಿಸಿ ಸೂರ್ಯೋದಯಕ್ಕಿಂತ ಮೊದಲು ದೇವರನ್ನು ಪೂಜೆ ಮಾಡುವುದೇ ಧನುರ್ಮಾಸದ ಆಚರಣೆಯಾಗಿದೆ. ಆಕಾಶದಲ್ಲಿ ನಕ್ಷತ್ರಗಳು ಕಾಣುತ್ತಿರುವಾಗಲೇ ದೇವಾಲಯಗಳು ಬಾಗಿಲು ತೆರೆದು ಸೂರ್ಯೋದಯಕ್ಕೂ ಮೊದಲೇ ಪೂಜೆಯಾಗಿ ಸಂಪನ್ನಗೊಳ್ಳುತ್ತದೆ. ಇದನ್ನೇ ಧನುರ್ಮಾಸ ಆಚರಣೆ ಎನ್ನಲಾಗುತ್ತದೆ.

ಧನುರ್ಮಾಸ ಎಂದರೆ, ಭಗವಾನ್ ಶ್ರೀಕೃಷ್ಣ ಪರಮಾತ್ಮನು ಭಗವದ್ಗೀತೆಯಲ್ಲಿ ಮಾಗಾನಾಂ ಮಾರ್ಗಶಿರಃ ಎಂದು ತಿಳಿಸಿದ್ದಾರೆ. ಅಂದರೆ ಸನ್ನಿಧಾನ ಫಲ ಧನುರ್ಮಾಸದಲ್ಲಿ ಬಹಳಿರುತ್ತದೆ ಎಂದಿರುತ್ತಾರೆ. ಆದ್ದರಿಂದ ಮಾರ್ಗಶಿರ ಮಾಸದಲ್ಲಿಯೇ ಈ ಧನುರ್ಮಾಸವು ಬಂದು ಬಹಳ ಪವಿತ್ರವಾದದ್ದಾಗಿದೆ. ಮಾರ್ಗಶಿರ ಮಾಸದ ಮಧ್ಯಂತರದಲ್ಲಿ ಆರಂಭವಾಗಿ ಪುಷ್ಯ ಮಾಸದ ಮಧ್ಯಂತರದಲ್ಲಿ ಮುಕ್ತಾಯಗೊಳ್ಳುತ್ತದೆ. ಅಂದರೆ ಧನುರ್ಮಾಸ ಬೇರೆ ಮಾಸಗಳಂತೆ ಪ್ರತ್ಯೇಕ ಮಾಸವಲ್ಲ. ಸೌರಮಂಡಲದ ರಾಜನಾದ ಸೂರ್ಯದೇವನು ಒಂದು ರಾಶಿಯಿಂದ ಮತ್ತೊಂದು ರಾಶಿಗೆ ಸಂಚರಿಸುತ್ತಿರುತ್ತಾರೆ. ಈ ಸಂಚಾರಕ್ಕೆ ತೆಗೆದುಕೊಳ್ಳುವ ಅವಧಿಯೇ ಒಂದು ತಿಂಗಳು. ಸೂರ್ಯನು ಧನುರಾಶಿಗೆ ಪ್ರವೇಸಿಸುವ ದಿನದಿಂದ ಆರಂಭಿಸಿ ಮಕರ ರಾಶಿಗೆ ಪ್ರವೇಶಿಸುವ ದಿನದವರೆಗಿನ ಒಂದು ತಿಂಗಳ ಕಾಲವೇ ಈ ಧನುರ್ಮಾಸ.

ಈ ಮಾಸದಲ್ಲಿ ಸೂರ್ಯನು ಒಂದು ತಿಂಗಳು ಇರುವನು. ಅದು ಧನುರಾಶಿಯಲ್ಲಿಯೇ ಇರುತ್ತಾರೆ. ಆದ್ದರಿಂದ ಈ ಮಾಸಕ್ಕೆ ಧನುರ್ಮಾಸ ಎನ್ನಲಾಗುತ್ತಿದೆ. ಸೂರ್ಯನು ಧನು ರಾಶಿಯನ್ನು ಪ್ರವೇಶಿಸುವ ಕಾಲವನ್ನು ಧನುರ್ ಸಂಕ್ರಮಣ ಎನ್ನಲಾಗುತ್ತದೆ. ಸೂರ್ಯ ಸಂಕ್ರಮಣ ಪ್ರವೇಶ ಮಾಡತ್ತಲೇ ಧನುರ್ ಸಂಕ್ರಮಣ ಕಾಲ ಮುಗಿಯುತ್ತದೆ.

ಧನುರ್ಮಾಸ ದೇವತಾ ಕಾರ್ಯಗಳಿಗೆ ಏಕೆ ಶ್ರೇಷ್ಠವೆಂದರೆ, ನಮ್ಮ ಒಂದು ವರ್ಷ ದೇವಾನುದೇವತೆಗಳಿಗೆ ಒಂದು ದಿನದ ಕಾಲವಾಗಿರುತ್ತದೆ. ಇದನ್ನು ಉತ್ತರಾಯಣ ಕಾಲ ಎಂದು ಕರೆಯಲಾಗುತ್ತದೆ. ಈ ಧನುರ್ಮಾಸವು ದಕ್ಷಿಣಾಯಣದ ಕೊನೆಗೆಯಲ್ಲಿ ಬರುತ್ತದೆ. ಅಂದರೆ ಇದು ದೇವತೆಗಳಿಗೆ ಬ್ರಾಹ್ಮೀ ಮುಹೂರ್ತವಾಗಿರುತ್ತದೆ. ಅಂದರೆ ಎಲ್ಲಾ ದೇವತೆಗಳು ಜಾಗೃತಗೊಳ್ಳುವಂತಹ ಸಮಯ. ದೇವಾನುದೇವತೆಗಳಿಗೆ ಬ್ರಾಹ್ಮೀ ಮುಹೂರ್ತವಾದಂತಹ ಈ ಶ್ರೇಷ್ಠ ಧನುರ್ಮಾಸದಲ್ಲಿ ದೇವತಾರಾಧನೆ ಮಾಡಿದರೆ ಅಕ್ಷಯ ಫಲ ಪ್ರಾಪ್ತಿಯಾಗುತ್ತದೆ. ಇದರ ಆಚರಣೆಯನ್ನು ಋಷಿಮುನಿಗಳೂ



ಅರುಣೋದಯ ಕಾಲದಲ್ಲಿ ಎದ್ದು ಪೂಜಿಸಿದರೆ ಸಾವಿರ ದಿನ ಪೂಜೆ ಮಾಡಿದಷ್ಟೇ ಫಲ ಸಿಗುತ್ತದೆ.

ಈ ಪೂಜೆ ಹೇಗೆ ಪ್ರಾರಂಭವಾಯಿತೆಂದರೆ, ಸೂರ್ಯದೇವನೇ ಮೊದಲು ಪ್ರಾರಂಭಿಸುತ್ತಾನೆ. ಇದರ ಆಚರಣೆಯನ್ನು ಋಷಿಮುನಿಗಳು ಅರುಣೋದಯ ಕಾಲದಲಲಿ ದೇವಪೂಜೆ, ಎರಡನೇಯದು ಮಧ್ಯಾಹ್ನ ಅಥವಾ ಹುಗ್ಗಿ ನೈವೇದ್ಯ. ಈ ವೇಳೆಯು ಶ್ರೀಹರಿಯ ಪೂಜೆಗೆ ವಿಶೇಷ ಕಾಲವಾಗಿದೆ. ಉತ್ಥಾನ ದ್ವಾದಶಿಯಿಂದ ಯೋಗ ನಿದ್ರೆಯಿಂದ ಜಾಗೃತಗೊಳ್ಳುವಂತಹ ವಿಷ್ಣು ದೇವರಿಗೆ ಅರುಣೋದಯ ಕಾಲವಾಗಿದೆ. ಹೀಗಾಗಿ ಧನುರ್ಮಾಸ ಶ್ರೇಷ್ಠವಾಗಿದೆ. ವೈಷ್ಣವ ಸಂಪ್ರದಾಯದಲ್ಲಿ ಈ ಮಾಸಕ್ಕೆ ಬಹಳ ಪ್ರಾಮುಖ್ಯತೆ ಇದೆ. ಈ ಮಾಸದಲ್ಲಿ ದೇವಾನುದೇವತೆಗಳು ಮಹಾವಿಷ್ಣುವಿನನ್ನು ನೆನೆಯುತ್ತಾರೆ ಎಂಬ ಪ್ರತೀತಿ ಇದೆ. ಈ ಸಮಯದಲ್ಲಿ ವಿಷ್ಣು ಸಹಸ್ರನಾಮ ನಾರಾಯಣ ಉಪನಿಷತ್‌ಗಳನ್ನು ಪಠಣ ಮಾಡಬೇಕು.

ವೀರಶೈವರು ಪುರುಷಸೂಕ್ತ ಹಾಗೂ ಶ್ರೀ ಸೂಕ್ತವನ್ನು ಪಠಣ ಮಾಡಬೇಕು. ಈ ಸಮಯದಲ್ಲಿ ವಿಷ್ಣುವಿನೊಂದಿಗೆ ಲಕ್ಷ್ಮೀದೇವಿಯನ್ನು ಪೂಜಿಸಿದರೆ ಧನ ಸಂಪತ್ತು ಪ್ರಾಪ್ತಿಯಾಗುತ್ತದೆ. ಈ ಧನುರ್ಮಾಸದಲ್ಲಿಯೇ ತಿರುಪತಿ ವೆಂಕಟೇಶನ ದರ್ಶನ ಮಾಡಿ, ನಂತರ ಕೊಲ್ಲಾಪೂರ ಮಹಾ ಲಕ್ಷ್ಮೀಯನ್ನು ಆರಾಧಿಸಿ, ಮಧ್ಯಾಹ್ನ ಹೆಸರುಬೇಳೆ ಪಾಯಸವನ್ನು ನೈವೇದ್ಯ ಮಾಡಬೇಕು. ಮೈ ಕೊರೆಯುವ ಚಳಿಯಲ್ಲಿ ಮೈ ಕುಗ್ಗುವುದರಿಂದ ಈ ಪಾಯಸವನ್ನು ಸೇವಿಸಿದರೆ, ನಮ್ಮಲ್ಲಿ ಕೊಬ್ಬನಾಂಶವನ್ನು ಹೆಚ್ಚಿಸಲು ಇದು ಸಾತ್ವಿಕ ಆಹಾರವಾಗಿದೆ.

ಈ ಧನುರ್ಮಾಸದಲ್ಲಿ ತೀರ್ಥ ಕ್ಷೇತ್ರಗಳಲ್ಲಿ ಹರಿಯುವ ನದಿಯಲ್ಲಿ ಪುಣ್ಯಸ್ನಾಣವನ್ನು ಮಾಡಿ, ಅಗಲಿದ ಪಿತೃಗಳಿಗೆ ತರ್ಪಣ ಬಿಡುವುದರಿಂದ ಹೆಚ್ಚಿನ ಫಲವನ್ನು ಪಡೆದುಕೊಳ್ಳಬಹುದಾಗಿದೆ. ಈ ವೇಳೆ ಬೆಳಗಿನ ಜಾವ ಬೇಗನೆ ಎದ್ದು ದೇಹವನ್ನು ದಂಡಿಸಿ, ಸ್ನಾನಮಾಡಿ ದೇವರನ್ನು ಪೂಜಿಸಿದರೆ, ನಮ್ಮ ಎಲ್ಲ ಇಷ್ಟಾರ್ಥಗಳು ಈಡೇರುತ್ತವೆ. ಇದನ್ನು ಕೆಲವರು ಶೂನ್ಯ ಮಾಸ ಹಾಗೂ ಪುಷ್ಯಮಾಸ ಎಂದು ಕರೆಯುತ್ತಾರೆ. ಈ ತಿಂಗಳಲ್ಲಿ ಯಾವುದೇ ಶುಭ ಕಾರ್ಯಗಳನ್ನು ಮಾಡುವುದಿಲ್ಲ. ಈ ಧನುರ್ಮಾಸವು ಕೇವಲ ದೇವತಾರಾಧನೆಗೆ ಸಂಬಂಧಿಸಿದ ಹೋಮ, ಹವನ, ರುದ್ರಾಭಿಷೇಕ, ಪೂಜಾದಿಗಳಿಗೆ ಪವಿತ್ರವಾಗಿರುತ್ತದೆ. ಈ ಮಾಸದಲ್ಲಿ ಇವುಗಳನ್ನು ಮಾಡುವುದರಿಂದ ಹಾಗೂ ಪರೋಹಿತರಿಂದ ಮಾಡಿಸುವುದರಿಂದ ಪುಣ್ಯಫಲ ಪ್ರಾಪ್ತಿಯಾಗುತ್ತದೆ. ಎಲ್ಲರೂ ಈ ಸಮಯದಲ್ಲಿ ಧಾನ-ಧರ್ಮಗಳಲ್ಲಿ, ಜಪತಪಗಳಲ್ಲಿ ಭಾಗಿಯಾಗಿ ಪುಣ್ಯಾತ್ಮರಾಗಿರಿ ಎಂಬುದು ನನ್ನ ಭಾವನೆ.

ಈ ಧನುರ್ಮಾಸವು ವ್ಯರ್ಥವಾಗದಿರಲಿ ಎಂದು ಈ ಮಾಸದಲ್ಲಿ ಯಾವುದೇ ಶುಭ ಕಾರ್ಯಗಳನ್ನು ಮಾಡುವುದಿಲ್ಲ. ಆದರೆ ಈ ಮಾಸದಲ್ಲಿ ದೇವರನ್ನು ಪೂಜಿಸಿದರೆ, ಜ್ಞಾನ ಸಂಪತ್ತು, ಆಯುಷ್ಯ ಅಭಿವೃದ್ಧಿಯಾಗುತ್ತದೆ. ಸಂತಾನವಿಲ್ಲದರು ಬೇಗನೇ ಎದ್ದು ಪೂಜೆ ಮಾಡಿದರೆ, ಸಂತಾನ ಪ್ರಾಪ್ತಿಯಾಗುತ್ತದೆ. ವಿವಾಹ ಬೇಗನೇ ಕೂಡಿಬರದಿರುವ ವರ ಹಾಗೂ ಕನ್ಯೆಯರು ಪೂಜಿಸಿದರೆ, ಕಂಕಣಭಾಗ್ಯ ಕೂಡಿಬರುತ್ತದೆ. ಅದರೊಂದಿಗೆ ದೇಶಕ್ಕೇ ಮೊದಲಾಗುವ ಮಕ್ಕಳು ಹುಟ್ಟುತ್ತಾರೆ ಎಂಬ ನಂಬಿಕೆ ಪ್ರತೀತಿಯಲ್ಲಿದೆ. ತಮ್ಮೆಲ್ಲರ ಮೇಲೆ ಆ ಭಗವಂತನ ಕೃಪೆ ಇರಲಿ ಎಂದು ಆಶಿಸುತ್ತೇವೆ.



**– ವೇ.ಮೂ. ಶರಣಯ್ಯಶಾಸ್ತ್ರಿಗಳು.**
ಶಿವಪ್ಪಯ್ಯನಮಠ, ಗದಗ.

## ಉಡುಗೊರೆಯಾಗಿ ನೀಡಿದ್ದ ಮೊಬೈಲ್ ಫೋನ್‌ಗಳನ್ನು ಅಸ್ಸಾಂ ಸರ್ಕಾರಕ್ಕೆ ಹಿಂದಿರುಗಿಸಿದ ಪತ್ರಕರ್ತರು



■ **ವಿಜಯಸಾಕ್ಷಿ ಸುದ್ದಿ, ಅಸ್ಸಾಂ**

ಅಸ್ಸಾಂ ಸರ್ಕಾರದಿಂದ ಹೊಸ ವರ್ಷದ ಉಡುಗೊರೆಯಾಗಿ ಪಡೆದ ಮೊಬೈಲ್ ಫೋನ್‌ಗಳನ್ನು ಕನಿಷ್ಠ ಇಬ್ಬರು ಪತ್ರಕರ್ತರು ಗುರುವಾರ ಹಿಂದಿರುಗಿಸಿದ್ದಾರೆ ಎಂದು 'ಸ್ಕ್ರೋಲ್' ವರದಿ ಮಾಡಿದೆ.

ಅಸ್ಸಾಂನ ಮಾಹಿತಿ ಮತ್ತು ಸಾರ್ವಜನಿಕ ಸಂಪರ್ಕ ನಿರ್ದೇಶನಾಲಯದಲ್ಲಿ ನೋಂದಾಯಿಸಲಾದ 2,200 ಕ್ಕೂ ಹೆಚ್ಚು ಪತ್ರಕರ್ತರು ಉಡುಗೊರೆಯನ್ನು ಸ್ವೀಕರಿಸಲಿದ್ದಾರೆ ಎಂದು ಅಧಿಕಾರಿಯೊಬ್ಬರು ಉಲ್ಲೇಖಿಸಿದ್ದಾರೆ. ಆನ್‌ಲೈನ್‌ನಲ್ಲಿ ಫೋನ್‌ನ ಬೆಲೆ ರೂ. 12,600 ರಿಂದ ರೂ. 16,000 ರವರೆಗೆ ಇದೆ. ಗುರುವಾರ ಗುವಾಹಟಿಯಲ್ಲಿ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರ ಪತ್ರಿಕಾಗೋಷ್ಠಿಯಲ್ಲಿ ಕೆಲವು ಪತ್ರಕರ್ತರು ಮೊಬೈಲ್ ಫೋನ್‌ಗಳನ್ನು ಪಡೆದರು. ಜನವರಿ 14 ರಂದು ಆಚರಿಸಲಾಗುವ ಮಾಘ ಬಿಹು ವೇಳೆಗೆ ಇತರರು ಜಿಲ್ಲಾಧಿಕಾರಿಗಳಿಂದ ಫೋನ್‌ಗಳನ್ನು ಪಡೆಯಲಿದ್ದಾರೆ. ಮುಂದಿನ ನಾಲ್ಕು ತಿಂಗಳಲ್ಲಿ ರಾಜ್ಯವು ವಿಧಾನಸಭಾ ಚುನಾವಣೆಗೆ ಸಜ್ಜಾಗುತ್ತಿರುವಂತೆಯೇ ಪತ್ರಕರ್ತರಿಗೆ ಸರ್ಕಾರದ ಉಡುಗೊರೆ ಮೊಬೈಲ್ ಫೋನ್ ನೀಡಿದೆ. 'ಎಲ್ಲಾ ಡಿಐಪಿಆರ್ ಕಾರ್ಡ್‌ದಾರರು ಸ್ಯಾಮ್‌ಸಂಗ್ ಗ್ಯಾಲಕ್ಸಿ ಎಫ್ 17 ಅನ್ನು ಸ್ವೀಕರಿಸುತ್ತಾರೆ' ಎಂದು ಅಧಿಕಾರಿ ಹೇಳಿರುವುದಾಗಿ ವರದಿಯಾಗಿದೆ, 'ಪ್ರತಿ ವರ್ಷ ನಾವು ಪತ್ರಕರ್ತರಿಗೆ ಕೆಲವು ಉಡುಗೊರೆಗಳನ್ನು ನೀಡುತ್ತೇವೆ.' ನಾವು ಲ್ಯಾಪ್‌ಟಾಪ್ ಬ್ಯಾಗ್‌ಗಳು, ಲೆದರ್ ಚೀಲಗಳು, ನೀರಿನ ಬಾಟಲ್ ಇತ್ಯಾದಿಗಳನ್ನು ನೀಡಿದ್ದೆವು. ದಿ ಟೆಲಿಗ್ರಾಫ್‌ನ ಉಮಾನಂದ್ ಜೆಯಾಸ್ವಾಲ್ ಮತ್ತು ದಿ ಎಕನಾಮಿಕ್ ಟೈಮ್ಸ್‌ನ ಬಿಕಾಶ್ ಸಿಂಗ್ ಮೊಬೈಲ್ ಫೋನ್‌ಗಳನ್ನು ಹಿಂತಿರುಗಿಸಿದ್ದಾರೆ ಎಂದು ವರದಿಯಾಗಿದೆ.

# ಎಕ್ಸೆಲ್ ಅಕಾಡೆಮಿಯಿಂದ ಉಚಿತ ಪುಸ್ತಕ ವಿತರಣೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಭಾಗದ ವಿದ್ಯಾರ್ಥಿಗಳೇ ಪ್ರತಿ ಬಾರಿ ಜೆ.ಇ.ಇ, ನೀಟ್ / ಸಿ.ಇ.ಟಿ ಮುಂತಾದ ಸ್ಪರ್ಧಾತ್ಮಕ ಪರೀಕ್ಷೇಗಳ ಆಯ್ಕೆಯಲ್ಲಿ ಅಗ್ರ ಪಂಕ್ತಿಯಲ್ಲಿರುತ್ತಾರೆ ಎಂಬುದು ಹೆಮ್ಮೆಯ ವಿಷಯ ಎಂದು ಎಕ್ಸೆಲ್ ಅಕಾಡೆಮಿ ಗದಗ ಝೋನಲ್ ಮ್ಯಾನೇಜರ್ ಶೌಖತ್ ನದಾಫ್ ಅಭಿಪ್ರಾಯಪಟ್ಟರು.

ಅವರು ಸನ್ಮಾರ್ಗ ಪದವಿಪೂರ್ವ ಮಹಾ ವಿದ್ಯಾಲಯದಲ್ಲಿ ಎಕ್ಸೆಲ್ ಅಕಾಡೆಮಿ ಬೆಂಗಳೂರು ಇವರ ವತಿಯಿಂದ ಜರುಗಿದ ಉಚಿತ ಫಾರ್ಮುಲಾ ಪುಸ್ತಕಗಳ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಎಕ್ಸೆಲ್ ಅಕಾಡೆಮಿಯಿಂದ ಬಾಗಲಕೋಟೆಯಲ್ಲಿ ಈ ಮೇಲಿನ ಎಲ್ಲ ಕೋರ್ಸ್‌ಗಳಿಗೆ ನುರಿತ ತರಬೇತುದಾರರಿಂದ ಕೋಚಿಂಗ್ ನೀಡಲಾಗುತ್ತದೆ. ಅದರ ಸಂಪೂರ್ಣ ಉಪಯೋಗವನ್ನು ನಮ್ಮ ಸನ್ಮಾರ್ಗ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಪಡೆದುಕೊಳ್ಳಲಿ ಎಂದು ಆಶಿಸಿದರು.

ಮಹಾವಿದ್ಯಾಲಯದ ನಿರ್ದೇಶಕ ಪ್ರೊ. ಪುನೀತ ದೇಶಪಾಂಡೆ ಮಾತನಾಡಿ, ಈ ಸೂತ್ರಗಳ ಸಂಗ್ರಹ ಪುಸ್ತಕ ಪಿಯುಸಿ ಹಾಗೂ ಮುಂದಿನ ಎಲ್ಲ ಸ್ಪರ್ಧಾತ್ಮಕ ಪರೀಕ್ಷಗಳಿಗೆ ಸಹಾಯಕಾರಿಯಾಗಿದೆ. ಅದನ್ನು ಅಭ್ಯಸಿಸಿ, ಮನನ ಮಾಡಿಕೊಂಡು ಉನ್ನತ ಸ್ಥಾನವನ್ನು ಅಲಂಕರಿಸಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ವೇದಿಕೆಯ ಮೇಲೆ ಸ್ಟೂಡೆಂಟ್ಸ್ ಎಜ್ಯುಕೇಶನ್ ಸೊಸೈಟಿಯ ಚೇರಮನ್ ಪ್ರೊ. ರಾಜೇಶ ಎಸ್.ಕುಲಕರ್ಣಿ, ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ, ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ, ನಿರ್ದೇಶಕ ಪ್ರೊ. ಸೈಯದ್ ಮತೀನ ಮುಲ್ಲಾ, ಪ್ರೊ. ಪುನೀತ ದೇಶಪಾಂಡೆ ಉಪಸ್ಥಿತರಿದ್ದರು. ಸಭೆಯಲ್ಲಿ ಮಹಾವಿದ್ಯಾಲಯದ ನಿರ್ದೇಶಕರಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ರಾಹುಲ್ ಒಡೆಯರ್, ಬೋಧಕ-ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಪ್ರೊ. ಸಂತೋಷ ನಾಗರಾಳ ಸ್ವಾಗತಿಸಿ ಕಾರ್ಯಕ್ರಮ ನಿರ್ವಹಿಸಿದರು. ಪ್ರೊ. ವಿಜಯಕುಮಾರ ಹೆಬಸೂರ ವಂದಿಸಿದರು.

# ರಾಜ್ಯ ಸರ್ಕಾರದ ಸಮೀಕ್ಷೆಯಲ್ಲಿ ಇವಿಎಂ ಮೇಲೆ ಜನ ವಿಶ್ವಾಸ ವ್ಯಕ್ತಪಡಿಸಿದ್ದಾರೆ ಎಂದ ವರದಿ : ಅಲ್ಲಗಳೆದ ಸಚಿವ ಪ್ರಿಯಾಂಕ್ ಖರ್ಗೆ

■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಹೆಚ್ಚಿನ ನಾಗರಿಕರು ಭಾರತದಲ್ಲಿ ಚುನಾವಣೆಗಳು ಮುಕ್ತ ಮತ್ತು ನ್ಯಾಯಯುತವಾಗಿ ನಡೆಯುತ್ತಿವೆ ಎಂದು ನಂಬುತ್ತಾರೆ ಹಾಗೂ ವಿದ್ಯುನ್ಮಾನ ಮತಯಂತ್ರಗಳ (ಇವಿಎಂ) ಮೇಲಿನ ನಂಬಿಕೆ ಹೆಚ್ಚಾಗಿದೆ ಎಂದು ಕರ್ನಾಟಕದ ಕಾಂಗ್ರೆಸ್ ಸರ್ಕಾರ ಪ್ರಕಟಿಸಿದ ರಾಜ್ಯವ್ಯಾಪಿ ಸಮೀಕ್ಷೆಯ ಫಲಿತಾಂಶಗಳು ತಿಳಿಸಿವೆ ಎಂಬ ವರದಿಗೆ ಸಚಿವ ಪ್ರಿಯಾಂಕ್ ಖರ್ಗೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಈ ಕುರಿತ ಡೆಕ್ಕನ್ ಹೆರಾಲ್ಡ್ ಪತ್ರಿಕಾ ವರದಿಯನ್ನು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಹಂಚಿಕೊಂಡಿರುವ ಪ್ರಿಯಾಂಕ್ ಖರ್ಗೆ, ರಾಜ್ಯ ಸರ್ಕಾರ ಸಮೀಕ್ಷೆ ಮಾಡಿಸಿಲ್ಲ. ಇದು ಚುನಾವಣಾ ಆಯೋಗದಿಂದ ರಾಜ್ಯ ಮುಖ್ಯ ಚುನಾವಣಾಧಿಕಾರಿಯ ಮೂಲಕ ಆಯೋಜಿಸಲಾದ ಸಮೀಕ್ಷೆ. ಪ್ರಧಾನಿ ಕಚೇರಿಯಲ್ಲೇ ಕೆಲಸ ಮಾಡುವ, ಪ್ರಧಾನಿಗೆ ಅದ್ದೂರಿ ಗೌರವದ ಕಾಣಿಕೆ ನೀಡಿದ ಪ್ರಧಾನಿಯ ಸೇವಕನಿಂದ ನಡೆದ ಸಮೀಕ್ಷೆ ಎಂದಿದ್ದಾರೆ.



ಮುಂದುವರಿದು, ಸಮೀಕ್ಷೆ ನಡೆದಿದ್ದು ಮೇ 2025ರಲ್ಲಿ. ಕಾಂಗ್ರೆಸ್ ಪಕ್ಷ ಮತಗಳ್ಳತನ (ವೋಟ್ ಚೋರಿ) ಕುರಿತು ವಿವರವಾಗಿ ಬಹಿರಂಗಪಡಿಸಿದ್ದು ಆಗಸ್ಟ್ 2025ರಲ್ಲಿ ಎಂದು ತಿಳಿಸಿದ್ದಾರೆ.

ಪ್ರತಿ ವಿಧಾನಸಭಾ ವ್ಯಾಪ್ತಿಯಲ್ಲಿ ಕೇವಲ 50 ಜನರನ್ನು ಸಂದರ್ಶಿಸಿದ್ದ ಈ ಸಮೀಕ್ಷೆಯು ಸಂಖ್ಯೆಯಲ್ಲಿ ದುರ್ಬಲ, ಮಾದರಿಗಳಲ್ಲಿ ವ್ಯಾಪಕ ದೋಷ ಮತ್ತು ಆಯ್ಕೆ ಪ್ರಕ್ರಿಯೆಯಲ್ಲಿ ಪಕ್ಷಪಾತ ಹೊಂದಿದ್ದು ನಿರ್ಧಾರ ಕೈಗೊಳ್ಳಲು ಸೂಕ್ತವಾಗಿಲ್ಲ. ಆದರೂ ಬಿಜೆಪಿ ಈ ಸಮೀಕ್ಷೆಯನ್ನು "ರಾಜ್ಯ ಸರ್ಕಾರದ ಸಮೀಕ್ಷೆ" ಎಂದು ತಪ್ಪಾಗಿ ಪ್ರಚಾರ ಮಾಡುತ್ತಿದೆ. ಆಶ್ಚರ್ಯದ ವಿಷಯವೆಂದರೆ, ಆಳಂದ ಕ್ಷೇತ್ರದ ಮತಗಳ್ಳತನ ಆರೋಪ ಪಟ್ಟಿಯಲ್ಲಿ ಮಾಜಿ ಬಿಜೆಪಿ ಶಾಸಕರನ್ನು ಮೊದಲ ಆರೋಪಿ (ಎ1) ಎಂದು ಹೆಸರಿಸಿರುವುದರ ಬಗ್ಗೆ ಬಿಜೆಪಿ ಮೌನವಾಗಿದೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಪ್ರಿಯಾಂಕ್ ಖರ್ಗೆ ಹಂಚಿಕೊಂಡಿರುವ ವರದಿಯಲ್ಲಿ, ಬೆಂಗಳೂರು, ಬೆಳಗಾವಿ, ಕಲಬುರಗಿ ಮತ್ತು ಮೈಸೂರಿನ ಆಡಳಿತ ವಿಭಾಗಗಳಲ್ಲಿರುವ 102 ವಿಧಾನಸಭಾ ಕ್ಷೇತ್ರಗಳಲ್ಲಿ 5,100 ಜನರನ್ನು ಒಳಗೊಂಡ ಈ ಸಮೀಕ್ಷೆಯನ್ನು ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕುಮಾರ್ ನಿಯೋಜಿಸಿದ್ದರು ಎಂದು ಹೇಳಲಾಗಿದೆ. ಆದರೆ, ವರದಿಯ ಆರಂಭದಲ್ಲಿ ಕರ್ನಾಟಕದ ಕಾಂಗ್ರೆಸ್ ಸರ್ಕಾರ ಬಿಡುಗಡೆ ಮಾಡಿದ ವರದಿ ಎಂದು ಹೇಳಲಾಗಿದೆ.

ಇದು 2024ರ ಲೋಕಸಭಾ ಚುನಾವಣೆಯ ನಂತರ ನಾಗರಿಕರ ಜ್ಞಾನ (Knowledge), ಧೋರಣೆ (Attitude) ಮತ್ತು ಅಭ್ಯಾಸ (Practice) ಅಂದರೆ ಕೆಎಪಿ (KAP) ಸಮೀಕ್ಷೆಯ ಅಂತಿಮ ಹಂತದ (endline) ಸಮೀಕ್ಷೆಯಾಗಿದೆ. ಈ ಸಮೀಕ್ಷೆಯ ವರದಿಯನ್ನು ಕರ್ನಾಟಕ ಸರ್ಕಾರದ ಯೋಜನೆ, ಕಾರ್ಯಕ್ರಮ ಮೇಲ್ವಿಚಾರಣೆ ಮತ್ತು ಅಂಕಿಅಂಶಗಳ ಇಲಾಖೆಯಡಿ ಬರುವ ಕರ್ನಾಟಕ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಪ್ರಾಧಿಕಾರ ಪ್ರಕಟಿಸಿದೆ. ಈ ಸಮೀಕ್ಷೆಯು ಚುನಾವಣಾ ಆಯೋಗದ ಕಾರ್ಯಕ್ರಮದ ಪ್ರಭಾವವನ್ನು ಮೌಲ್ಯಮಾಪನ ಮಾಡಲು ನಡೆಸಲಾಗಿದ್ದು, ಕರ್ನಾಟಕದಲ್ಲಿ ಮತದಾರರ ಚುನಾವಣಾ ಪ್ರಕ್ರಿಯೆ ಬಗ್ಗೆ ತಿಳುವಳಿಕೆ, ನಂಬಿಕೆ ಮತ್ತು ಭಾಗವಹಿಸುವಿಕೆಯನ್ನು ಅಧ್ಯಯನ ಮಾಡಿದೆ ಎಂದು ವರದಿ ತಿಳಿಸಿದೆ.

## ಎಸ್.ಎಸ್. ಕಳಸಾಪೂರ ನಿಧನ; ನೇತ್ರದಾನ



■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ನಿವಾಸಿ, ಗಣ್ಯರಾದ ಶಿವರುದ್ರಪ್ಪ ಎಸ್.ಕಳಸಾಪೂರ (72) ಅವರು ಗುರುವಾರ ಮಧ್ಯಾಹ್ನ ನಿಧನರಾದರು. ಪತ್ನಿ, ಈರ್ವರು ಪುತ್ರರು, ಓರ್ವ ಪುತ್ರಿ ಹಾಗೂ ಅಪಾರ ಬಳಗವನ್ನು ಬಿಟ್ಟು ಅಗಲಿದ್ದಾರೆ.

ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಪದಾಧಿಕಾರಿಗಳು ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿ, ಮೃತರ ನೇತ್ರದಾನಕ್ಕೆ ಪ್ರೇರಣೆ ನೀಡಿದರು. ಕುಟುಂಬದವರ ಒಪ್ಪಿಗೆಯ ಮೇರೆಗೆ ಹುಬ್ಬಳ್ಳಿ ಕಣ್ಣಿನ ಆಸ್ಪತ್ರೆಯ ತಜ್ಞರ ತಂಡವು ನೇತ್ರದಾನ ಪ್ರಕ್ರಿಯೆಯನ್ನು ಪೂರ್ಣಗೊಳಿಸಿತು.

ಈ ಸಂದರ್ಭದಲ್ಲಿ ಕ್ಲಬ್ ಅಧ್ಯಕ್ಷ ರಾಜು ವೇರ್ಣೇಕರ, ಕಾರ್ಯದರ್ಶಿ ರಾಜಣ್ಣ ಮಲ್ಲಾಡದ, ಖಜಾಂಚಿ ರೇಣುಕಪ್ರಸಾದ ಹಿರೇಮಠ, ರಮೇಶ ಶಿಗ್ಲಿ, ಪ್ರಶಾಂತ ಅಳಗುಂದಿ, ಡಾ. ಗುರುಪ್ರಸಾದ, ಡಾ. ಶ್ವೇತಾ ಸಂಕನೂರ ಮುಂತಾದವರಿದ್ದರು.

ವ್ಯಕ್ತಿಯ ನಿಧನದ ಬಳಿಕ ಕುಟುಂಬದವರು ಮೃತ ವ್ಯಕ್ತಿಯ ನೇತ್ರಗಳನ್ನು ದಾನ ಮಾಡುವ ಮೂಲಕ ಇನ್ನೊಬ್ಬರಿಗೆ ದೃಷ್ಟಿ ಬರುವಂತಾಗಲು ಮಾನವೀಯ ಕಾರ್ಯಕ್ಕೆ ಮುಂದಾಗಬೇಕೆಂದು ಲಯನ್ಸ್ ಕ್ಲಬ್ ಕಾರ್ಯದರ್ಶಿ ರಾಜಣ್ಣ ಮಲ್ಲಾಡದ ಸಾರ್ವಜನಿಕರಲ್ಲಿ ಮನವಿ ಮಾಡಿಕೊಂಡಿದ್ದಾರೆ.

### ತಾಲೂಕಿನಾದ್ಯಂತ ಜನವರಿ 7ರಿಂದ 17ರವರೆಗೆ ವಿಶೇಷ ಕರವಸೂಲಿ ಅಭಿಯಾನ; ಇಒ ಚಂದ್ರಶೇಖರ ಕಂದಕೂರ

# ತೆರಿಗೆ ಬಾಕಿ ಉಳಿಸಿಕೊಂಡವರ ವಿರುದ್ಧ ಕ್ರಮ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ತಾಲೂಕಿನ 13 ಗ್ರಾಮ ಪಂಚಾಯಿತಿಗಳಲ್ಲಿ ಜನವರಿ 7ರಿಂದ 17ರವರೆಗೆ ವಿಶೇಷ ಕರವಸೂಲಿ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಗ್ರಾಮ ಪಂಚಾಯಿತಿಯ ಎಲ್ಲಾ ಸಿಬ್ಬಂದಿಗಳು ಈ ಅಭಿಯಾನದಲ್ಲಿ ಭಾಗವಹಿಸಿ ಹೆಚ್ಚಿನ ಪ್ರಮಾಣದಲ್ಲಿ ಕರವಸೂಲಿ ಮಾಡಿ ಅಭಿಯಾನವನ್ನು ಯಶಸ್ವಿಗೊಳಿಸಬೇಕು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಕಂದಕೂರ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ತಾಲೂಕಿನ ಎಲ್ಲಾ ಗ್ರಾ.ಪಂಗಳಲ್ಲಿ ಕರವಸೂಲಾತಿ ವಿಶೇಷ ಅಭಿಯಾನವನ್ನು ಹಮ್ಮಿಕೊಂಡು ಹೆಚ್ಚಿನ ಪ್ರಮಾಣದ ತೆರಿಗೆ ವಸೂಲಿ ಮಾಡುವಂತೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಉಪಕಾರ್ಯದರ್ಶಿಗಳು ಸೂಚಿಸಿದ ಪ್ರಯುಕ್ತ ಜನವರಿ 7ರಿಂದ 17ರವರೆಗೆ ಬೆಳಿಗ್ಗೆ 6 ಗಂಟೆಯಿಂದ ಸಂಜೆಯವರೆಗೂ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ದ್ವಿ.ದ.ಲೆ. ಸಹಾಯಕರು, ಕರವಸೂಲಿಗಾರರು, ಗಣಕಯಂತ್ರ ನಿರ್ವಾಹಕರು, ವಾಟರ್ ಮ್ಯಾನ್‌ಗಳು, ಸಿಪಾಯಿಗಳು ಸೇರಿ ಇತರೆ ಗ್ರಾ.ಪಂ ಸಿಬ್ಬಂದಿಗಳು ತಂಡವಾಗಿ ಕಾರ್ಯ ನಿರ್ವಹಿಸಿ, ಹೆಚ್ಚಿನ ಪ್ರಮಾಣದಲ್ಲಿ ತೆರಿಗೆ ಸಂಗ್ರಹ ಮಾಡುವ ಮೂಲಕ ಸದರಿ ಕರವಸೂಲಾತಿ ಅಭಿಯಾನವನ್ನು ಯಶಸ್ವಿಗೊಳಿಸಬೇಕು ಎಂದು ಸೂಚಿಸಿದ್ದಾರೆ.



ಕರವಸೂಲಿ ಅಭಿಯಾನದಲ್ಲಿ ಆಯಾ ಗ್ರಾಮ ಪಂಚಾಯಿತಿಯಲ್ಲಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರು, ಸಹಾಯ ಪಡೆದು ಸಾರ್ವಜನಿಕರ ಸಹಕಾರದೊಂದಿಗೆ ಎಲ್ಲಾ ಸಿಬ್ಬಂದಿಗಳನ್ನು ಒಗ್ಗೂಡಿಸಿಕೊಂಡು ಕರವಸೂಲಾತಿ ವಿಶೇಷ ಅಭಿಯಾನವನ್ನು ಹಮ್ಮಿಕೊಂಡು ಗರಿಷ್ಠ ಪ್ರಮಾಣದಲ್ಲಿ ತೆರಿಗೆ ವಸೂಲಿ ಮಾಡಿ ಅಭಿಯಾನವನ್ನು ಯಶಸ್ವಿಗೊಳಿಸಬೇಕು ಎಂದು ತಿಳಿಸಿದ್ದಾರೆ. ಕಳೆದ 3 ವರ್ಷಗಳಿಂದ ತೆರಿಗೆ ಪಾವತಿಸದೇ ಬಾಕಿ ಉಳಿಸಿಕೊಂಡಿರುವ ಎಲ್ಲಾ ಆಸ್ತಿಗಳ ಮಾಲೀಕರಿಗೆ ನೋಟೀಸ್ ನೀಡುವುದು ಮತ್ತು ಸದರಿ ದಿನದಂದು ಬಾಕಿಯಿರುವ ಎಲ್ಲ ತೆರಿಗೆಗಳನ್ನು ವಸೂಲಿ ಮಾಡುವುದು. ಸದರಿ ಮಾಹಿತಿಯು ಪಂಚತಂತ್ರ 2.0 ತಂತ್ರಾಂಶದಲ್ಲಿ ಲಭ್ಯವಿದ್ದು, ಪಟ್ಟಿಯನ್ನು ಪಡೆದುಕೊಂಡು ಸಂಬಂಧಿಸಿದವರಿಗೆ ನೋಟೀಸ್ ಜಾರಿ ಮಾಡಿ ಜನವರಿ 17ರೊಳಗೆ ಕರವಸೂಲಿ ಮಾಡಿಸಬೇಕು ಎಂದು ತಿಳಿಸಿದರು.

ತಮ್ಮ ಗ್ರಾ.ಪಂ ವ್ಯಾಪ್ತಿಯಲ್ಲಿ ಅತೀ ಹೆಚ್ಚು ತೆರಿಗೆ ಬಾಕಿ ಉಳಿಸಿಕೊಂಡಿರುವ ಕನಿಷ್ಟ 200 ಆಸ್ತಿ ಮಾಲೀಕರನ್ನು ಗುರುತಿಸಿ ಅವರಿಗೆ ತಗಾದೆ ನೋಟಿಸ್ ನೀಡಿ, ಅಭಿಯಾನದ ದಿನದಂದು ಸಂಪೂರ್ಣ ತೆರಿಗೆ ವಸೂಲಿ ಮಾಡಬೇಕು. ತೆರಿಗೆ ಪಾತಿಸದೇ ಬಾಕಿ ಉಳಿಸಿಕೊಂಡಿರುವ ಮೊಬೈಲ್ ಟವರ್ ಕಂಪನಿಗಳಿಗೆ ನೋಟಿಸ್ ಜಾರಿ ಮಾಡಿ ಸಂಪೂರ್ಣ ಮೊತ್ತ ಪಾವತಿಸಿಕೊಳ್ಳುವುದು. ತೆರಿಗೆ ಪಾವತಿ ಬಾಕಿ ಹೊಂದಿರುವ ಅಂಗಡಿ ಮಾಲೀಕರು, ಉದ್ದಿಮೆದಾರರು, ಸರ್ಕಾರಿ ನೌಕರರರಿಗೆ ನೋಟೀಸ್ ನೀಡಿ ಶೇ. 100ರಷ್ಟು ಬಾಕಿ ವಸೂಲಿ ಮಾಡಬೇಕು ಎಂದು ಸೂಚಿಸಿದ್ದಾರೆ.

> ತಾಲೂಕಿನಲ್ಲಿ ತೆರಿಗೆ ವಸೂಲಿ ಪ್ರಮಾಣ ಕಡಿಮೆ ಇರುವ ಕಾರಣ ಜನವರಿ 7ರಿಂದ 17ರವರೆಗೂ ತಾಲೂಕಿನ 13 ಗ್ರಾ.ಪಂಗಳಲ್ಲಿ ವಿಶೇಷ ಕರವಸೂಲಿ ಅಭಿಯಾನ ಹಮ್ಮಿಕೊಳ್ಳಲಾಗಿದೆ. ತೆರಿಗೆ ವಸೂಲಿ ಅಭಿಯಾನದಲ್ಲಿ ಗ್ರಾಮ ಪಂಚಾಯಿತಿಯ ಎಲ್ಲ ಸಿಬ್ಬಂದಿಗಳು ಕಡ್ಡಾಯವಾಗಿ ಹಾಜರಾಗಿ ತೆರಿಗೆ ವಸೂಲಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಬೇಕು. ಅಭಿಯಾನದ ಸಂದರ್ಭದಲ್ಲಿ ಯಾವುದೇ ಸಿಬ್ಬಂದಿಗಳು ರಜೆ ಪಡೆಯುವಂತಿಲ್ಲ. ಅನಧಿಕೃತವಾಗಿ ಗೈರು ಹಾಜರಾದ ಅಧಿಕಾರಿಗಳು /ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು.
>
> **– ಚಂದ್ರಶೇಖರ ಕಂದಕೂರ,**
> ತಾ.ಪಂ ಇ.ಓ, ಗಜೇಂದ್ರಗಡ.

ಗ್ರಾಮ ಪಂಚಾಯತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳಲ್ಲಿ ಸ್ವಚ್ಛ ವಾಹಿನಿ ಮತ್ತು ಡಂಗೂರ ಸಾರುವ ಮೂಲಕ ಅಭಿಯಾನದ ಬಗ್ಗೆ ಸಾರ್ವಜನಿಕವಾಗಿ ವ್ಯಾಪಕ ಪ್ರಚಾರ ನೀಡುವುದು. ಸದರಿ ಅಭಿಯಾನದಲ್ಲಿ ಎಲ್ಲಾ ಚುನಾಯಿತ ಪ್ರತಿನಿಧಿಗಳನ್ನು ಒಗ್ಗೂಡಿಸಿಕೊಂಡು ಆಯಾ ವಾರ್ಡ್‌ವಾರು ಸಾರ್ವಜನಿಕರ ಮನವೊಲಿಸಿ ತೆರಿಗೆ ವಸೂಲಿ ಮಾಡಲು ಅಗತ್ಯ ಕ್ರಮ ಕೈಗೊಳ್ಳಬೇಕು. ಎರಡನೇ ಶನಿವಾರ ಮತ್ತು ಬಾನುವಾರ ರಜೆ ಮಾಡದೇ ಕರವಸೂಲಿ ಮಾಡಬೇಕು. ಜನವರಿ 15 (ಮಕರ ಸಂಕ್ರಾಂತಿ) ದಿನದಂದು ರಜೆ ನೀಡಲಾಗಿದೆ ಎಂದು ತಿಳಿಸಿದ್ದಾರೆ.

## ವೆಂಕಟೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವೈಕುಂಠ ಏಕಾದಶಿಯ ದಿನದಂದು ಪಟ್ಟಣದ ಸವಣೂರ ರಸ್ತೆಯಲ್ಲಿರುವ ಶ್ರೀ ವೆಂಕಟೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ, ಧಾರ್ಮಿಕ ಆಚರಣೆ-ಸಂಪ್ರದಾಯಗಳು ನೆರವೇರಿದವು.

ಪಟ್ಟಣದ ದಿ. ವೆಂಕಪ್ಪ ಅಗಡಿ ಕುಟುಂಬದಿಂದ ತಿರುಪತಿ ವೆಂಕಟೇಶ್ವರ ದೇವಸ್ಥಾನದ ಮಾದರಿಯಲ್ಲಿಯೇ ನಿರ್ಮಿತವಾದ ದೇವಸ್ಥಾನದಲ್ಲಿ ಬೆಳಿಗ್ಗೆಯಿಂದಲೇ ಶ್ರೀ ವೆಂಕಟೇಶ್ವರ ಮೂರ್ತಿಗೆ ಅಭಿಷೇಕ, ವಿಶೇಷ ಅಲಂಕಾರ, ಮಹಾಮಂಗಳಾರತಿ, ಸಂಗೀತ ಕಾರ್ಯಕ್ರಮ, ವೆಂಕಟೇಶ್ವರ ಮೂರ್ತಿಯ ಪಲ್ಲಕ್ಕಿ ಉತ್ಸವ, ಪ್ರಸಾದ ಸೇವೆ ನೆರವೇರಿತು.



ವೈಕುಂಠ ಏಕಾದಶಿಯಂದು ವಿಷ್ಣುವಿನ ರೂಪದ ಶ್ರೀ ವೆಂಕಟೇಶ್ವರನ ದರ್ಶನ, ಉಪವಾಸ ವ್ರತಾಚರಣೆ ಮಾಡುವದರಿಂದ ಕಷ್ಟ ಕಾರ್ಪಣ್ಯಗಳು ಕಳೆದು ನೆಮ್ಮದಿ, ಶಾಂತಿ, ಪುಣ್ಯ, ಮೋಕ್ಷ ಪ್ರಾಪ್ತಿಯಾಗುತ್ತದೆ. ಈ ಹಿನ್ನೆಲೆಯಲ್ಲಿ ಪಟ್ಟಣ ಸೇರಿ ಸುತ್ತಲಿನ ಗ್ರಾಮಗಳ ಭಕ್ತರು ವೆಂಕಟೇಶ್ವರ ದೇವಸ್ಥಾನಕ್ಕೆ ಬಂದು ದರ್ಶನಾಶೀರ್ವಾದ ಪಡೆದರು ಎಂದು ದೇವಸ್ಥಾನದ ಡಾ. ಅರುಣಕುಮಾರ ಜೋಶಿ ಹೇಳಿದರು.

ಭಾವಸಾರ ಕ್ಷತ್ರಿಯ ಸಮಾಜದಿಂದ ಭಗವದ್ಗೀತಾ 9 ಮತ್ತು 12ನೇ ಅಧ್ಯಾಯ ಪರಾಯಣ ನೆರವೇರಿತು. 2012ರಲ್ಲಿ ತಮಿಳುನಾಡಿನ ಉತ್ಕೃಷ್ಟ ಶಿಲೆಗಳಿಂದ ನಿರ್ಮಾಣಗೊಂಡ ಈ ಬೃಹತ್ ದೇವಸ್ಥಾನದ ಸುತ್ತಲೂ ಇರುವ ಶ್ರೀದೇವಿ, ಭೂದೇವಿ, ಗಣಪತಿ, ಮೈಲಾರಲಿಂಗೇಶ್ವರ, ನಾಗದೇವತೆಗಳ ಮಂಟಪಗಳಲ್ಲಿನ ಮೂರ್ತಿಗಳಿಗೆ ವಿಶೇಷ ಪೂಜಾ ಅಲಂಕಾರ ನೆರವೇರಿಸಲಾಗಿತ್ತು.

ಅಗಡಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಚಾರ್ಯ ಡಾ. ಪರಶುರಾಮ ಬಾರ್ಕಿ ಸೇರಿ ಆಡಳಿತ ಮಂಡಳಿ, ವ್ಯವಸ್ಥಾಪಕ ರಮೇಶ ಬಾವಿಕಟ್ಟಿ ನೇತೃತ್ವದಲ್ಲಿ ಪೂಜಾ ಕೈಂಕರ್ಯಗಳು ನೆರವೇರಿದವು.

### ಲಿಂ. ಶ್ರೀ ಸಿದ್ದೇಶ್ವರ ಮಹಾಸ್ವಾಮಿಗಳ ಪುಣ್ಯ ಸ್ಮರಣೆ ಕಾರ್ಯಕ್ರಮ

## ಶ್ರೀಗಳ ಸಂದೇಶಾಮೃತಗಳು ಸಮಾಜಕ್ಕೆ ದಾರಿದೀಪ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಅಕ್ಕಮಹಾದೇವಿ ದೇವಸ್ಥಾನದಲ್ಲಿ ಶುಕ್ರವಾರ ಸಂಜೆ ಪೂಜ್ಯ ಶ್ರೀ ಸಿದ್ದೇಶ್ವರ ಸತ್ಸಂಗ ಬಳಗ, ಕದಳಿ ಮಹಿಳಾ ವೇದಿಕೆ ಹಾಗೂ ಶರಣ ಸಾಹಿತ್ಯ ಪರಿಷತ್, ರಾಜ ರಾಜೇಶ್ವರಿ ಮಹಿಳಾ ಸಾಹಿತ್ಯ ಮತ್ತು ಸಂಸ್ಕೃತಿ ವೇದಿಕೆ, ಅಕ್ಕಮಹಾದೇವಿ ಬಳಗ, ಪ್ರೇಮಕ್ಕ ಅಭಿಮಾನಿ ಬಳಗದ ಸಹಯೋಗದಲ್ಲಿ ವಿಜಯಪುರ ಜ್ಞಾನಯೋಗಾಶ್ರಮದ ಜ್ಞಾನಯೋಗಿ ಪರಮಪೂಜ್ಯ ಲಿಂ. ಶ್ರೀ ಸಿದ್ದೇಶ್ವರ ಮಹಾಸ್ವಾಮಿಗಳ ಪುಣ್ಯ ಸ್ಮರಣೆ ಕಾರ್ಯಕ್ರಮ ನೆರವೇರಿತು.



ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ವಕೀಲರಾದ ಮಹೇಶ ಹಾರೋಗೇರಿ, ನಡೆದಾಡುವ ದೇವರೆಂದೇ ಪೂಜ್ಯನೀಯ ಭಾವನೆಯಿಂದ ಕಂಡ ನಾಡಿನ ಶ್ರೇಷ್ಠ ಸಂತ ಸಿದ್ದೇಶ್ವರ ಶ್ರೀಗಳು ತಮ್ಮ ಪ್ರವಚನದ ದಿವ್ಯ ಸಂದೇಶಗಳ ಮೂಲಕ ಸಮಾಜವನ್ನು ಸನ್ಮಾರ್ಗದತ್ತ ಕೊಂಡೊಯ್ಯುವ ಚೇತನ ಶಕ್ತಿಯಾಗಿದ್ದರು. ನಾಡಿನ ಜನರಲ್ಲಿ ಜಾತಿ-ಬೇಧ ಮರೆಸಿ ಶಾಂತಿ, ಪ್ರೇಮ, ಜ್ಞಾನ, ನಡೆ-ನುಡಿ ಹೇಗಿರಬೇಕೆಂಬುದನ್ನು ಸಾರಿ ಹೇಳಿದ ಅಜಾತಶತ್ರು ಅವರಾಗಿದ್ದರು. ಅವರ ಆಚಾರ-ವಿಚಾರ, ಚಿಂತನೆ ಸಂದೇಶಾಮೃತಗಳು ಸಮಾಜಕ್ಕೆ ದಾರಿದೀಪವಾಗಿವೆ. ಅವುಗಳನ್ನು ಎಲ್ಲರೂ ಬದುಕಿನಲ್ಲಿ ಅಳವಡಿಸಿಕೊಳ್ಳೋಣ ಎಂದರು.

ಅಧ್ಯಕ್ಷತೆ ವಹಿಸಿದ್ದ ಹಿರಿಯರಾದ ಡಿ.ಬಿ. ಬಳಿಗಾರ ಮಾತನಾಡಿ, ಸಿದ್ದೇಶ್ವರ ಸ್ವಾಮೀಜಿ ಅನುಭಾವಿಗಳು, ಶಿವಾನುಭಾವಿಗಳು ಆಗಿದ್ದರಿಂದ ಅವರ ಪ್ರವಚನದ ಎಲ್ಲ ವಿಚಾರಗಳು ಅಮೃತಕ್ಕೆ ಸಮಾನವಾಗಿದ್ದವು. ಮಿತ ಮತ್ತು ಸಾತ್ವಿಕ ಆಹಾರಿಗಳಾಗಿದ್ದರು. ಆದರೆ ಅವರಿಗೆ ಭಕ್ತರಿಗೆ ಉಣಿಸುವ ದಾಸೋಹಭಾವ ಮತ್ತು ತಾಯಿ ಪ್ರೀತಿ ಅವರದಾಗಿತ್ತು. ನಾಡಿನ ಜನರಲ್ಲಿ ಜಾತಿ-ಬೇಧ ಮರೆಸಿ ಶಾಂತಿ, ಪ್ರೇಮ, ಜ್ಞಾನ, ನಡೆ-ನುಡಿ ಹೇಗಿರಬೇಕೆಂಬುದನ್ನು ಸಾರಿ ಹೇಳಿದ ಅಜಾತಶತ್ರು ಸಿದ್ದೇಶ್ವರ ಶ್ರೀಗಳು ಎಂದರು.

ಎಲ್.ಎಸ್. ಅರಳಿಹಳ್ಳಿ, ನಿರ್ಮಲಾ ಅರಳಿ, ಪೂರ್ಣಾಜಿ ಖರಾಟೆ, ಮಹಾಬಳೇಶ್ವರಪ್ಪ ಬೇವಿನಮರದ, ಎಂ.ಕೆ. ಕಳ್ಳಿಮಠ, ಬಸವರಾಜ ಬೆಂಡಿಗೇರಿ, ಲಲಿತಕ್ಕ ಕೆರಿಮನಿ, ಅಶ್ವಿನಿ ಅಂಕಲಕೋಟಿ, ಈಶ್ವರ ಮೆಡ್ಲೇರಿ, ವೀರಣ್ಣ ಅಕ್ಕೂರ, ನಿಂಗಪ್ಪ ತಹಸೀಲ್ದಾರ, ಗಂಗಾಧರ ಅರಳಿ, ಪ್ರತಿಮಾ ಮಹಾಜನಶೆಟ್ಟರ, ನಾಗರಾಜ ಕುಲಕರ್ಣಿ, ನಾಗರಾಜ ಮಜ್ಜಿಗುಡ್ಡ, ಎಸ್.ಬಿ. ಕೊಣ್ಣೂರ, ಗೀತಾ ಮಾನ್ವಿ, ರೇಖಾ ವಡಕಣ್ಣವರ, ಶೋಭಾ ಗಾಂಜಿ, ಗೌರಿ ಸಂಗಪ್ಪಶೆಟ್ಟರ ಮುಂತಾದವರಿದ್ದರು. ರತ್ನಾ ಕರ್ಕಿ, ನಂದಿನಿ ಮಾಳವಾಡ ನಿರೂಪಿಸಿದರು.

## ರಸ್ತೆ ಸುರಕ್ಷತಾ ನಿಯಮಗಳನ್ನು ಉಲ್ಲಂಘಿಸದಿರಿ

▶▶ಮೊದಲನೇ ಪುಟದಿಂದ

ತಪ್ಪಿಸಿ ಬೇರೆ ದಾರಿಯಿಂದ ವಾಹನ ಚಲಾಯಿಸಿ ವಿನಾಕಾರಣ ಅಪಘಾತಗಳು ಸಂಭವಿಸಲು ಅನುವು ಮಾಡುತ್ತಾರೆ. ರಸ್ತೆ ಸುರಕ್ಷತಾ ನಿಯಮಗಳ ಪಾಲನೆ ಎಲ್ಲರಿಗೂ ಬಹಳ ಮುಖ್ಯವಾಗಿದೆ ಎಂದರು. ಪ್ರಾದೇಶಿಕ ಸಾರಿಗೆ ಅಧಿಕಾರಿ ವಿಶಾಲ ಜೆ.ಪಿ ಮಾತನಾಡಿ, ರಸ್ತೆ ಸುರಕ್ಷತಾ ನಿಯಮಗಳ ಪಾಲನೆ ಮಾಡಿ ವಾಹನ ಚಾಲಕರು ಅಪಘಾತಗಳನ್ನು ತಪ್ಪಿಸಿ ತಮ್ಮ ಹಾಗೂ ಮತ್ತೊಬ್ಬರ ಪ್ರಾಣವನ್ನು ಉಳಿಸಬಹುದು. ರಸ್ತೆ ಸುರಕ್ಷತಾ ನಿಯಮಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಶಾಲಾ ಬಸ್‌ಗಳ ಸುರಕ್ಷತೆ ಮತ್ತು ನಿರ್ವಹಣಾ ಕೈಪಿಡಿ, ರಸ್ತೆ ಸುರಕ್ಷತೆಗೆ ಸಂಬಂಧಿಸಿದ ಪೋಸ್ಟರ್ ಹಾಗೂ ಸ್ಟಿಕರ್‌ಗಳನ್ನು ಬಿಡುಗಡೆಗೊಳಿಸಲಾಯಿತು. ಕಾರ್ಯಕ್ರಮದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಮ್ಯಾಕ್ಸಿಕ್ಯಾಬ್ ಅಸೋಸಿಯೇಶನ್ ಅಧ್ಯಕ್ಷ ಸಾದಿಕ ನರಗುಂದ, ನಾಗರಾಜ ಅಸುಂಡಿ, ಅರುಣ ಕಟ್ಟಿಮನಿ, ಶಾಲಾ ಕಾಲೇಜು ವಿದ್ಯಾರ್ಥಿಗಳು, ಶಿಕ್ಷಕರು ಇನ್ನಿತರರು ಹಾಜರಿದ್ದರು.

ಭೂಮಿಕಾ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಎಂ.ಎ. ಯರಗುಡಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ಶೌಚಾಲಯ ನಿರ್ಮಾಣಕ್ಕೆ ಸಹಾಯಧನ

■ವಿಜಯಸಾಕ್ಷಿ ಸುದ್ದಿ, ಗದಗ

ಮುಂಡರಗಿ ಪುರಸಭೆ ವ್ಯಾಪ್ತಿಯಲ್ಲಿ ಎಸ್.ಎಫ್.ಸಿ ನಿಧಿ 2025-26ನೇ ಸಾಲಿನ ಸ್ವಚ್ಛ ಭಾರತ್ ಮಿಷನ್ 2.0 ಯೋಜನೆಯಡಿಯಲ್ಲಿ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕಾಗಿ ಪುರಸಭೆಗೆ ಒಟ್ಟು 22 ವೈಯಕ್ತಿಕ ಶೌಚಾಲಯ ಗುರಿಯನ್ನು ನಿಗದಿಪಡಿಸಿದೆ. ವೈಯಕ್ತಿಕ ಶೌಚಾಲಯಗಳನ್ನು ನಿರ್ಮಾಣ ಮಾಡಿಕೊಳ್ಳಲು ಪರಿಶಿಷ್ಟ ಜಾತಿ ಫಲಾನುಭವಿಗಳಿಗೆ -17, ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ-5 ಶೌಚಾಲಯಗಳನ್ನು ಮಾತ್ರ ನಿಗದಿಪಡಿಸಲಾಗಿದೆ. ಪ್ರತಿ ಒಟ್ಟು ಫಲಾನುಭವಿಗಳಿಗೆ 23333 ರೂ.ಗಳು ಮಾತ್ರ ನಿಯಮಾನುಸಾರವಾಗಿ ಭರಿಸಲು ಅವಕಾಶ ಇರುತ್ತದೆ.

ಮುಂಡರಗಿ ಪುರಸಭೆ ವ್ಯಾಪ್ತಿಯಲ್ಲಿ ವೈಯಕ್ತಿಕ ಶೌಚಾಲಯಗಳನ್ನು ಹೊಂದದೇ ಇರುವ ಹಾಗೂ ಈ ಹಿಂದೆ ವೈಯಕ್ತಿಕ ಶೌಚಾಲಯಕ್ಕೆ ಪುರಸಭೆಯಿಂದ ಯಾವುದೇ ಅನುದಾನ ಪಡೆಯದೇ ಇರುವ ಫಲಾನುಭವಿಗಳಿಂದ ತಮ್ಮ ಸ್ವಂತ ಜಾಗದಲ್ಲಿ ವೈಯಕ್ತಿಕ ಶೌಚಾಲಯ ನಿರ್ಮಿಸಿಕೊಳ್ಳಲು ಸಹಾಯಧನಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತರು ಅರ್ಜಿಗಳನ್ನು ಜನವರಿ 17ರೊಳಗಾಗಿ ಕಚೇರಿಯ ವೇಳೆಯಲ್ಲಿ ಮುಂಡರಗಿ ಪುರಸಭೆ ಕಾರ್ಯಾಲಯಕ್ಕೆ ಅರ್ಜಿಯೊಂದಿಗೆ ಅವಶ್ಯಕ ದಾಖಲೆಗಳನ್ನು ಲಗತ್ತಿಸಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮುಂಡರಗಿ ಪುರಸಭೆ ಕಾರ್ಯಾಲಯ ದೂರವಾಣಿ ಸಂಖ್ಯೆ-08371-262638 ಸಂಪರ್ಕಿಸಬಹುದಾಗಿದೆ ಎಂದು ಮುಂಡರಗಿ ಪುರಸಭೆ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿರ್ಗತಿಕರಿಗೆ ಉಚಿತ ಕಂಬಳಿ ವಿತರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸೊಲಿಡಾರಿಟಿ ಯೂತ್ ಮೂವ್ಮೆಂಟ್ (SYM) ವತಿಯಿಂದ ಹೊಸ ವರ್ಷದ ಅಂಗವಾಗಿ ಬಡವರಿಗೆ, ನಿರ್ಗತಿಕರು ಮತ್ತು ವೃದ್ಧರು ಹಾಗೂ ಚಳಿಗಾಲದಲ್ಲಿ ತೊಂದರೆಗೊಳಗಾದ ಸುಮಾರು 80 ಜನರಿಗೆ ಉಚಿತವಾಗಿ ಕಂಬಳಿಗಳನ್ನು ವಿತರಣೆ ಮಾಡಲಾಯಿತು.

ಮುಖ್ಯ ಅತಿಥಿಗಳಾಗಿ ಇಮಾಮಸಾಬ ಮೊರಬದ ಹಾಗೂ ಜುನೇದ್‌ಸಾಬ ಉಮಚಗಿ ಪಾಲ್ಗೊಂಡು ಮಾತನಾಡಿ, ಇಂತಹ ಸಮಾಜಮುಖಿ ಕಾರ್ಯ ಕಳೆದ ವರ್ಷದಂತೆಯೇ ಈ ವರ್ಷವೂ ಸೊಲಿಡಾರಿಟಿ ಯುತ್ ಮೂವ್ಮೆಂಟ್ (SYM) ವತಿಯಿಂದ ಮಾಡಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾಧ್ಯಕ್ಷ ಯೂಸುಫ್ ಮುಲ್ಲಾ, ಕಾರ್ಯದರ್ಶಿ ರಿಯಾಜ್ ಶೇಖ, ಕಾರ್ಯಕರ್ತರಾದ ಅಬ್ದುಲ್ ಹಫೀಜ್ ಉಮಚಗಿ, ಮುನ್ನ ಕಲ್ಮನಿ, ಅಕ್ಬರ್‌ಅಲಿ ಅತ್ತಾರ, ಜಹೀರ್ ಅಹ್ಮದ್, ಜಾವೀದ ಉಮಚಗಿ, ಖಾಸಿಂ ದರ್ಗದ್, ಮೆಹಬೂಬ್‌ಅಲಿ, ಜೈದ್ ಸರ್ವರ್, ಅಲ್ತಾಫ್ ನದಾಫ್, ಮುಹಮ್ಮದ್ ಫಹಿಮ್, ಸಮೀರ್ ಅಕ್ಕಿ, ವಸೀಮ್ ಅಹ್ಮದ್, ತನ್ವೀರ್ ಶೇಖ, ಫುರಖಾನ ಉಮಚಗಿ ಹಾಗೂ ಸಂಘದ ಕಾರ್ಯಕರ್ತರು ಉಪಸ್ಥಿತರಿದ್ದರು.

# ಬೆಳೆಗೆ ಪೆಟ್ರೋಲ್ ಸುರಿದು ಬೆಂಕಿಯಿಟ್ಟ ದುಷ್ಕರ್ಮಿಗಳು!

▶▶ಮೊದಲನೇ ಪುಟದಿಂದ



ಸ್ಥಳಕ್ಕೆ ದೌಡಾಯಿಸಿದ ರೋಣ ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ ಜಿ.ಪಾಟೀಲ ರೈತರಿಗೆ ಸಾಂತ್ವನ ಹೇಳಿ, ಧೈರ್ಯ ತುಂಬಿದರಲ್ಲದೆ, ಅಧಿಕಾರಿಗಳು ನಿಮಗೆ ಸೂಕ್ತ ನ್ಯಾಯವನ್ನು ಒದಗಿಸುವ ಕೆಲಸ ಮಾಡುತ್ತಾರೆ ಮತ್ತು ಶಾಸಕ ಜಿ.ಎಸ್. ಪಾಟೀಲರ ಸೂಚನೆಯ ಮೇರೆಗೆ ಮುಂಡರಗಿ ಬ್ಲಾಕ್ ಕಾಂಗ್ರೆಸ್ ವತಿಯಿಂದ ಕುಟುಂಬಕ್ಕೆ 2 ಲಕ್ಷ ರೂ ನೆರವನ್ನು ನೀಡುತ್ತೇವೆ ಎಂದು ಹೇಳಿದರು.

ಮುಂಡರಗಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಡಿ.ಡಿ. ಮೋರನಾಳ, ಗದಗ ಜಿಲ್ಲಾ ರೈತ ಸಂಘಟನೆಯ ಅಧ್ಯಕ್ಷ ಶಂಕರಗೌಡ ಜಾಯನಗೌಡರ, ಈಶಪ್ಪ ಓಲಿ, ಕಾಶಪ್ಪ ಅಳವಂಡಿ, ಜಿ.ಎಸ್. ಕೊರ್ಲಹಳ್ಳಿ, ಪ್ರಕಾಶ ಸಜ್ಜನ, ಕುಬೇರ್ ನಾಯಕ್, ಯಲಪ್ಪಗೌಡ ಕರಮುಡಿ, ವಿಶ್ವನಾಥ ಪಾಟೀಲ, ಸುತ್ತಮುತ್ತಲಿನ ಗ್ರಾಮಸ್ಥರು, ಗ್ರಾಮದ ರೈತರು, ಮಹಿಳೆಯರು ನೊಂದ ರೈತ ಕುಟುಂಬಕ್ಕೆ ಸಾಂತ್ವನ ಹೇಳಿದರು.

## ಅಕ್ಷರ ಜಾತ್ರೆ ಸಂಪೂರ್ಣ ಯಶಸ್ವಿಯಾಗಿದೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಈ ವಾರ ನಡೆದ ಅಕ್ಷರ ಜಾತ್ರೆ ಸಂಪೂರ್ಣವಾಗಿ ಯಶಸ್ವಿಯಾಗಿದೆ. ಅದಕ್ಕೆ ಶ್ರಮಿಸಿದ, ಸಹಕರಿಸಿದ ಎಲ್ಲರಿಗೂ ಅಭಿನಂದನಾಶೀರ್ವಾದಗಳು ಎಂದು ಹಾಲಕೆರೆ ಸಂಸ್ಥಾನ ಮಠದ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿ ಹೇಳಿದರು.

ಅನ್ನದಾನೇಶ್ವರ ಮಂಟಪದಲ್ಲಿ ನಡೆದ ಅಭಿನಂದನಾ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.



ಅಕ್ಷರ ಜಾತ್ರೆಯಲ್ಲಿ ಏರ್ಪಡಿಸಿದ್ದ ವಿಜ್ಞಾನ, ಗಣಿತ ವಸ್ತು ಪ್ರದರ್ಶನಗಳು ನಮ್ಮ ಮನಸ್ಸಿಗೆ ಮತ್ತು ನೋಡುಗರಿಗೆ ತುಂಬಾ ಹಿಡಿಸಿದವು. ಈ ಕಾರ್ಯದಲ್ಲಿ ನೀವು ತೋರಿದ ಕಾಳಜಿ, ಶಿಸ್ತು ಸಂತಸ ನೀಡಿದೆ. ಒಂದು ಕಾರ್ಯಕ್ರಮ ಎಂದ ಮೇಲೆ ಲೋಪದೋಷಗಳು ಇದ್ದೇ ಇರುತ್ತವೆ. ಈ ಸಾರೆಯ ಕಾರ್ಯಕ್ರಮದಲ್ಲಿ ಆದ ಲೋಪದೋಷಗಳನ್ನು ಪಟ್ಟಿ ಮಾಡಿ, ಮುಂದೆ ಅಂತಹ ಲೋಪಗಳು ಮರುಕಳಿಸದಂತೆ ಎಚ್ಚರ ವಹಿಸೋಣ ಎಂದರು.

ನೀವು ಏನೇ ಪ್ರಾಮಾಣಿಕ ಕಾರ್ಯ ಕೈಗೊಂಡರೂ ಸಂಸ್ಥೆ ನಿಮ್ಮ ಜೊತೆಗಿರುತ್ತದೆ ಎಂಬುದನ್ನು ನೆನಪಿಡಿ. ಈ ಕಾರ್ಯಕ್ರಮ ಯಶಸ್ವಿಯಾಗಲು ಅವರಿವರೆನ್ನದೆ ಎಲ್ಲರೂ ಶ್ರಮಿಸಿದ್ದೀರಿ. ಅದಕ್ಕಾಗಿ ಅನ್ನದಾನೀಶ ನಿಮಗೆ ಸಕಲೈಶ್ವರ್ಯಗಳನ್ನು ಕೊಟ್ಟು ಆಶೀರ್ವದಿಸಲಿ. ಅನೇಕ ದಾನಿಗಳು ಸಹ ಈ ಜಾತ್ರೆಗೆ ಸಹಾಯ ಸಹಕಾರ ನೀಡಿದ್ದಾರೆ. ಪ್ರತ್ಯಕ್ಷ-ಪರೋಕ್ಷ ಸಹಾಯ ನೀಡಿ, ಅಕ್ಷರ ಸಹಕಾರ ಮಾಡಿ ಜಾತ್ರೆ ಯಶಸ್ವಿಯಾಗುವಂತೆ ಮಾಡಿದ ಸರ್ವರಿಗೂ ಶ್ರೀ ಅನ್ನದಾನೀಶಸನ್ಮಂಗಳವನ್ನುಂಟು ಮಾಡಲಿ ಎಂದು ಶ್ರೀಗಳು ಆಶೀರ್ವದಿಸಿದರು.

ಕಾರ್ಯಕ್ರಮದಲ್ಲಿ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಆಡಳಿತಾಧಿಕಾರಿ ಡಾ. ಜಿ.ಕೆ. ಕಾಳೆ, ಕುಷ್ಟಗಿ ಸಂಸ್ಥೆಯ ಅಧ್ಯಕ್ಷ ದೇವೇಂದ್ರಪ್ಪ ಬಳೂಟಗಿ ಸೇರಿದಂತೆ ವಿವಿಧ ಅಂಗ ಸಂಸ್ಥೆಗಳ ಚೇರಮನ್‌ರು, ಸದಸ್ಯರು, ಪ್ರಾಚಾರ್ಯರು, ಮುಖ್ಯ ಶಿಕ್ಷಕರು, ಸಿಬ್ಬಂದಿಯವರು ಉಪಸ್ಥಿತರಿದ್ದರು.

# ಇಂದು ಅಯ್ಯಪ್ಪಸ್ವಾಮಿ ಮಹಾಪೂಜೆ, ಅನ್ನಸಂತರ್ಪಣೆ



**■ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ನರಸಾಪೂರ ಗ್ರಾಮದ ಖಾದಿ ನಗರದ ಶ್ರೀ ವರಸಿದ್ಧಿ ವಿನಾಯಕ ದೇವಸ್ಥಾನದ ಸಮುದಾಯ ಭವನದಲ್ಲಿನ ಶ್ರೀ ರಂಗಪ್ಪಜ್ಜ ಸನ್ನಿಧಾನದಲ್ಲಿ ಶ್ರೀ ಅಯ್ಯಪ್ಪಸ್ವಾಮಿಯ ಮಹಾಪೂಜೆ, ಅನ್ನಸಂತರ್ಪಣೆ ಹಾಗೂ ಇರುಮುಡಿ ಕಟ್ಟುವ ಕಾರ್ಯಕ್ರಮ ಜ. 3, 4ರಂದು ನಡೆಯಲಿದೆ.

ದೇವು ಗುರುಸ್ವಾಮಿ ಹಾಗೂ ನಾರಾಯಣ ಗುರುಸ್ವಾಮಿ ನೇತೃತ್ವದಲ್ಲಿ ಜ. 3ರಂದು ಬೆಳಿಗ್ಗೆ 10.30ಕ್ಕೆ ಶ್ರೀ ಅಯ್ಯಪ್ಪಸ್ವಾಮಿಯ ಭಜನೆ ಹಾಗೂ ಮಹಾಪೂಜೆ ನೆರವೇರಲಿದೆ. ಮಧ್ಯಾಹ್ನ 12ಕ್ಕೆ ಅನ್ನಸಂತರ್ಪನೆ ಜರುಗಲಿದೆ. ಆ. 4ರಂದು ಬೆಳಿಗ್ಗೆ 7ಕ್ಕೆ ಇರುಮುಡಿ ಕಟ್ಟುವ ಕಾರ್ಯಕ್ರಮ ಜರುಗಲಿದ್ದು, ಸಂಜೆ 5ಕ್ಕೆ ವರಸಿದ್ಧಿ ವಿನಾಯಕ ಸನ್ನಿಧಾನದಿಂದ ಗುರುಸ್ವಾಮಿಗಳು ಹಾಗೂ ಮಾಲಾಧಾರಿಗಳು ಶ್ರೀ ರಂಗಪ್ಪಜ್ಜನ ಮಠದವರೆಗೆ ಪಾದಯಾತ್ರೆ ಮೂಲಕ ಸಾಗಿ ಅಲ್ಲಿಂದ ಶಬರಿಮಲೆ ಯಾತ್ರೆ ಕೈಗೊಳ್ಳುವರು ಎಂದು ಮಲಾಧಾರಿಗಳಾದ ಉಮೇಶ ಕನವಳ್ಳಿ, ಪಂಪಣ್ಣ ಶ್ಯಾವಿ, ತಮೇಶ ತಟ್ಟಿ, ಮೈಲಾರಪ್ಪ ಶ್ಯಾವಿ, ರಾಜು ಕನಕಿ ಹಾಗೂ ಖಾದಿ ನಗರದ ನಾಗರಿಕ ಹಿತರಕ್ಷಣಾ ಸಮಿತಿ ಅಧ್ಯಕ್ಷ ಕಲ್ಲಯ್ಯ ಹಿರೇಮಠ ತಿಳಿಸಿದ್ದಾರೆ.

**ಶಿರಹಟ್ಟಿ ಪಟ್ಟಣ ಪಂಚಾಯಿತಿಯಲ್ಲಿ ಇನ್ನುಮುಂದೆ ಇ-ಆಫೀಸ್ ಜಾರಿ**

# ಮಧ್ಯವರ್ತಿಗಳಿಗೆ ಬ್ರೇಕ್ ಹಾಕಲು ಕಠಿಣ ಕ್ರಮ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಇಲ್ಲಿಯ ಸಾರ್ವಜನಿಕರಿಗೆ ಪಟ್ಟಣ ಪಂಚಾಯಿತಿಯ ಕೆಲಸ-ಕಾರ್ಯಗಳು ಸುಗಮವಾಗಿ ಆಗದೇ ಇರುವುದರ ಬಗ್ಗೆ ಹಲವು ದೂರುಗಳು ಬಂದಿದ್ದರಿಂದ ತಹಸೀಲ್ದಾರ ಹಾಗೂ ಪಟ್ಟಣ ಪಂಚಾಯಿತಿಯ ಆಡಳಿತಾಧಿಕಾರಿ ಕೆ. ರಾಘವೇಂದ್ರ ರಾವ್ ತಮ್ಮ ಇಚ್ಛಾಶಕ್ತಿಯಿಂದ ಇದೇ ಪ್ರಥಮ ಬಾರಿಗೆ ಪಟ್ಟಣ ಪಂಚಾಯಿತಿಯಲ್ಲಿ ಇ-ಆಫೀಸ್ ವ್ಯವಸ್ಥೆಯನ್ನು ಜಾರಿ ಮಾಡಿದ್ದಾರೆ.



ಸಾರ್ವಜನಿಕರು ಇನ್ನು ಮುಂದೆ ತಮ್ಮ ಅರ್ಜಿಗಳನ್ನು ಇ-ಆಫೀಸ್ ಮೂಲಕವೇ ಸಲ್ಲಿಸಬಹುದಾಗಿದ್ದು, ಇದಕ್ಕೆ ಕಡ್ಡಾಯವಾಗಿ ಆನ್‌ಲೈನ್ ರಸೀದಿಯನ್ನು ಪಡೆಯಬೇಕು. ಅರ್ಜಿ ಸ್ವೀಕೃತವಾದ ಬಳಿಕ ನಿಗದಿಪಡಿಸಿದ ಅವಧಿಯಲ್ಲಿ ಅವರ ಕೆಲಸವಾಗಲಿದೆ. ಅರ್ಜಿಗಳು ಸಂಬಂಧಿಸಿದ ವಿಭಾಗಗಳ ಸಿಬ್ಬಂದಿಗಳ ಗಮನಕ್ಕೆ ಬಂದು ಅದು ನಿಗದಿಪಡಿಸಿದ ಅವಧಿಯೊಳಗೆ ಕಾರ್ಯಗತಗೊಳ್ಳಲಿದೆ. ವಿಳಂಬವಾದರೆ ಸಂಬಂಧಿಸಿದವರನ್ನು ಹೊಣೆಗಾರರನ್ನಾಗಿಸಲಾಗುವುದು. ಇನ್ನು ಮುಂದೆ ಎಲ್ಲ ಅರ್ಜಿಗಳನ್ನೂ ಇ-ಆಫೀಸ್ ಮೂಲಕವೇ ನಿರ್ವಹಣೆ ಮಾಡಬೇಕೆಂದು ಸಿಬ್ಬಂದಿಗಳಿಗೆ ಸೂಕ್ತ ನಿರ್ದೇಶನ ನೀಡಲಾಗಿದೆ ಎಂದು ಆಡಳಿತಾಧಿಕಾರಿಗಳು ತಿಳಿಸಿದ್ದಾರೆ.

ಪಟ್ಟಣ ಪಂಚಾಯಿತಿಗೆ ಸಂಬಂಧಿಸಿದಂತೆ ಕೆಲಸ-ಕಾರ್ಯಗಳಿಗೆ ತಮ್ಮ ದೈನಂದಿನ ಕೆಲಸಗಳನ್ನು ಬಿಟ್ಟು ಕಚೇರಿಗೆ ಪದೇ ಪದೇ ಅಲೆದಾಟವನ್ನು ತಪ್ಪಿಸುವುದು ಮತ್ತು ಪಾರದರ್ಶಕ ಆಡಳಿತ ನೀಡುವ ಉದ್ದೇಶದಿಂದ ಸಮರ್ಪಕ ದಾಖಲೆಗಳ ಕ್ರೋಢೀಕರಣಕ್ಕಾಗಿ ಸಂಪೂರ್ಣ ಆನ್‌ಲೈನ್ ವ್ಯವಸ್ಥೆಯ ಮೂಲಕವೇ ಸೇವೆ ಒದಗಿಸಲು ಕ್ರಮ ವಹಿಸಿದ್ದು, ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬಹುದಾಗಿದೆ.

ಕಚೇರಿ ಒಳಗಡೆ ಮಧ್ಯವರ್ತಿಗಳ ಪ್ರವೇಶ ಮಾಡಬಾರದೆಂದು ಈಗಾಗಲೇ ಮುಖ್ಯಾಧಿಕಾರಿಗೆ ಸೂಚಿಸಿದ್ದು, ಒಂದು ವೇಳೆ ಮಧ್ಯವರ್ತಿಗಳ ಪ್ರವೇಶವಾದರೆ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು. ನೇರವಾಗಿ ಸಂಬಂಧಿಸಿದ ಅರ್ಜಿದಾರರೇ ಕಚೇರಿಗೆ ಬರಬೇಕು, ಸಿಬ್ಬಂದಿಗಳಿಗೆ ಸರಕಾರ ನಿಗದಿಪಡಿಸಿದ ಶುಲ್ಕಕ್ಕಿಂತ ಹೆಚ್ಚಿನ ಹಣ ನೀಡಬಾರದು, ಒಂದು ವೇಳೆ ಬೇಡಿಕೆ ಇಟ್ಟಲ್ಲಿ ತಮ್ಮ ಗಮನಕ್ಕೆ ತರಬಹುದಾಗಿದೆ ಎಂದು ತಹಸೀಲ್ದಾರ ಕೆ. ರಾಘವೇಂದ್ರ ರಾವ್ ತಿಳಿಸಿದ್ದಾರೆ.

> ಸಾರ್ವಜನಿಕರಿಗೆ ತ್ವರಿತಗತಿಯಲ್ಲಿ ಸೇವೆಯನ್ನು ಒದಗಿಸುವ ಉದ್ದೇಶದಿಂದ ಇ-ಆಫೀಸ್ ವ್ಯವಸ್ಥೆ ಜಾರಿಗೊಳಿಸಲಾಗಿದ್ದು, ಸಾರ್ವಜನಿಕರು ತಮ್ಮ ಅರ್ಜಿಗಳನ್ನು ಆನ್‌ಲೈನ್ ಮೂಲಕವೇ ಸಲ್ಲಿಸಿ ಅದಕ್ಕೆ ರಸೀದಿಯನ್ನು ಪಡೆಯಬೇಕು. ಸರಕಾರ ನಿಗದಿಪಡಿಸಿದ ಶುಲ್ಕಕ್ಕಿಂತ ಹೆಚ್ಚಿಗೆ ಹಣ ನೀಡಬಾರದು, ಸಿಬ್ಬಂದಿಗಳು ಬೇಡಿಕೆ ಇಟ್ಟಲ್ಲಿ ತಮ್ಮ ಗಮನಕ್ಕೆ ತರಬಹುದು. ಮಧ್ಯವರ್ತಿಗಳಿಗೆ ಬ್ರೇಕ್ ಹಾಕಲು ಕಠಿಣ ಕ್ರಮ ತೆಗೆದುಕೊಳ್ಳಲಾಗಿದೆ.
>
> – ಕೆ. ರಾಘವೇಂದ್ರ ರಾವ್.
> ತಹಸೀಲ್ದಾರರು, ಶಿರಹಟ್ಟಿ.

ಕಚೇರಿಗೆ ನಿತ್ಯವೂ ಸಾರ್ವಜನಿಕರು ವಿವಿಧ ಕೆಲಸಕ್ಕೆ ಆಗಮಿಸುವ ಸಂದರ್ಭದಲ್ಲಿ ಮಧ್ಯಾಹ್ನದ ನಂತರ ಕಚೇರಿಯಲ್ಲಿ ಸಂಬಂಧಿಸಿದ ಸಿಬ್ಬಂದಿಗಳು ಸಿಗದೇ ಇರುವುದು ಸಾಮಾನ್ಯವಾಗಿದೆ. ಎಲ್ಲ ಕಚೇರಿಗಳಲ್ಲಿ ಇರುವ ಹಾಗೆ ಪಟ್ಟಣ ಪಂಚಾಯಿತಿ ಕಚೇರಿಯಲ್ಲೂ ಸಹ ಇ-ಹಾಜರಿ ವ್ಯವಸ್ಥೆ ಸಮರ್ಪಕವಾಗಿ ಜಾರಿಯಾಗಬೇಕು. ಸಿಬ್ಬಂದಿಗಳು ತಮಗೆ ಯಾವಾಗ ಬೇಕೋ ಆವಾಗ ಕಚೇರಿಗೆ ಆಗಮಿಸಿ-ತೆರಳುವ ಪರಿಪಾಠವನ್ನು ಅಳವಡಿಸಿಕೊಂಡಿದ್ದು, ಈ ವ್ಯವಸ್ಥೆಯನ್ನು ಸರಿಪಡಿಸುವಂತೆ ಆಡಳಿತಾಧಿಕಾರಿಗೆ ಸಾರ್ವಜನಿಕರು ಒತ್ತಾಯಿಸುತ್ತಿದ್ದಾರೆ.

# ಪ್ರತಿಭಾ ಕಾರಂಜಿಯಿಂದ ಪ್ರತಿಭೆಗಳ ವಿಕಸನ



**■ವಿಜಯಸಾಕ್ಷಿ ಸುದ್ದಿ, ಗದಗ**

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಜಿಲ್ಲಾ ಪಂಚಾಯಿತಿ ಗದಗ, ತಾಲೂಕು ಪಂಚಾಯಿತಿ ಗದಗ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ, ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಶಹರ ವಲಯ ಗದಗ ಮತ್ತು ಸಿ.ಎಸ್. ಪಾಟೀಲ ಪ್ರಾಥಮಿಕ ಹಾಗೂ ಪ್ರೌಢಶಾಲೆ ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಗದಗ ಶಹರ ವಲಯದ ತಾಲೂಕು ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮ ಆಯೋಜಿಸಲಾಗಿತ್ತು.


ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪ್ರತಿಭಾ ಕಾರಂಜಿ ಮತ್ತು ಕಲೋತ್ಸವಗಳು ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಪ್ರಚುರಪಡಿಸಲು ಮತ್ತು ಅವರಲ್ಲಿರುವ ಪ್ರತಿಭೆಗಳ ವಿಕಸನಕ್ಕೆ ಸೂಕ್ತವಾಗಿದೆ. ಅಲ್ಲದೆ ಮಕ್ಕಳಲ್ಲಿರುವ ಪ್ರತಿಭೆಯನ್ನ ಗುರುತಿಸಿ, ಪೋಷಿಸುವ ಶಿಕ್ಷಕರ ಮತ್ತು ಪಾಲಕರ ಕಾರ್ಯ ಶ್ಲಾಘನೀಯ ಎಂದು ಹೇಳಿದರು.

ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ ಮಾತನಾಡಿ, ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮಗಳು ಮಕ್ಕಳ ವಿಶೇಷ ಪ್ರತಿಭೆಯನ್ನು ಸಾಕಾರಗೊಳಿಸಲು ಸೂಕ್ತವಾದ ವೇದಿಕೆಯಾಗಿದೆ. ಇವತ್ತಿನ ದಿನಮಾನಗಳಲ್ಲಿ ಶಿಕ್ಷಕರು ಮತ್ತು ಪಾಲಕರು ಮಕ್ಕಳ ಸುರಕ್ಷತೆಯ ಬಗ್ಗೆ ಹೆಚ್ಚಿನ ಗಮನ ನೀಡಬೇಕು ಎಂದು ಹೇಳಿದರು.

ವಿದ್ಯಾವರ್ಧಕ ಸಂಘದ ಗೌರವ ಕಾರ್ಯದರ್ಶಿ ವೀರನಗೌಡ ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಅತಿಥಿಗಳಾಗಿ ಗದಗ ಶಹರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ರವೀಂದ್ರ ಶೆಟ್ಟಪ್ಪನವರ, ಕ್ಷೇತ್ರ ಸಮನ್ವಯ ಅಧಿಕಾರಿ ಎಸ್.ಪಿ. ಪ್ರಭಯ್ಯನಮಠ, ರಾಷ್ಟ್ರ ಪ್ರಶಸ್ತಿ ವಿಜೇತ ಶಿಕ್ಷಕ ಎಸ್.ಎನ್. ಬಳ್ಳಾರಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಎಲ್ಲ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಸಂಪನ್ಮೂಲ ವ್ಯಕ್ತಿ ಯರಗುಡಿ ಕಾರ್ಯಕ್ರಮ ನಿರೂಪಿಸಿದರು. ಶಿಕ್ಷಣ ಸಂಯೋಜಕ ಈಶಪ್ಪ ಮಡಿವಾಳರ ವಂದಿಸಿದರು.

# ಸಿದ್ದೇಶ್ವರ ಶ್ರೀಗಳು ದೇವತಾ ಮನುಷ್ಯರು



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಸಾಮಾನ್ಯರಲ್ಲಿ ಸಾಮಾನ್ಯರಂತೆ ಬದುಕಿ, ಬಾಳಿನ ಬೆಳಕಾದವರು ವಿಜಾಪೂರ ಯೋಗಾಶ್ರಮದ ಸಿದ್ದೇಶ್ವರ ಶ್ರೀಗಳು ಎಂದು ಡಾ. ಎಸ್.ಸಿ. ಚವಡಿ ಹೇಳಿದರು.

ಅವರು ಪಟ್ಟಣದ ರೇಣುಕಾ ಯಲ್ಲಮ್ಮಾ ದೇವಸ್ಥಾನದಲ್ಲಿ ವಿಜಾಪೂರ ಸಿದ್ದೇಶ್ವರ ಶ್ರೀಗಳ 3ನೇ ವರ್ಷದ ಪುಣ್ಯ ಸ್ಮರಣೆ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ಯಾವಾಗಲೂ ಸಮ ಸಮಾಜಕ್ಕಾಗಿ ಮನ ಮಿಡಿಯುತ್ತಿದ್ದರು.

ಜಾತಿ,ಮತ, ಪಂಥಗಳನ್ನು ಮೀರಿ ಎಲ್ಲರನ್ನು ಒಂದೇ ಭಾವದಿಂದ ಕಾಣುತ್ತಿದ್ದರು. ಅವರ ಪ್ರವಚನಗಳ ಸಾರವನ್ನು ಅಳವಡಿಸಿಕೊಂಡ ಸಾಕಷ್ಟು ಜನರ ಬದುಕಿನಲ್ಲಿ ಬದಲಾವಣೆಗೆ ದಾರಿ ದೀಪವಾದವರು. ಅವರ ಸರಳ, ಮೃದು ಸ್ವಭಾವದ ಸಾತ್ವಿಕ ಜೀವನವೇ ಒಂದು ಆದರ್ಶ. ಜ್ಞಾನ ದಾಸೋಹದ ಮೂಲಕ ಅಂಧಕಾರವನ್ನು ನಿವಾರಿಸಿ ವಿಶ್ವಪ್ರೇಮತ್ವ, ನಿಸರ್ಗ ಸೌಂದರ್ಯ ಅಸ್ವಾದಿಸುವ ಗುಣ ಮತ್ತು ಎಲ್ಲಾ ಧರ್ಮಗಳ ಸಾರ ತಿಳಿದುಕೊಂಡು ಮಾನವ ಧರ್ಮದ ಉದ್ಧಾರಕ್ಕಾಗಿ ತಮ್ಮನ್ನು ತಾವು ಸಮಾಜಕ್ಕೆ ಅರ್ಪಣೆ ಮಾಡಿಕೊಂಡ ಸಂತರು. ಇಂತಹ ಸಂತರ ಪ್ರವಚನಗಳು ನಮ್ಮೆಲ್ಲರ ಬದುಕಿಗೆ ಮಾರ್ಗದರ್ಶನವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಎಸ್.ಸಿ. ಬಡ್ನಿ, ಮಾಹಾಂತೇಶ ನಪೂರಿಮಠ, ಶಿವಾನಂದ ಆಪ್ತಗೇರಿ, ಶಂಕ್ರಪ್ಪ ನಿರಲಗಿ, ಮಂಜುನಾಥ ಮಟ್ಟಿ ಯೋಗ ಶಿಕ್ಷಕ ಪ್ರಕಾಶ ಮದ್ದಿನ ಹಾಗೂ ಯೋಗ ಪಟುಗಳು ಇದ್ದರು.

# ಸರ್ಕಾರಿ ನೌಕರರ ಕ್ರೀಡಾಕೂಟದಲ್ಲಿ ಪಾಲ್ಗೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಗದಗ ಇವರ ಸಹಯೋಗದಲ್ಲಿ ಜ. 3ರಂದು ನಡೆಯಲಿರುವ 2025-26ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳ ರಾಜ್ಯ ಸರ್ಕಾರಿ ನೌಕರರ ಕ್ರೀಡಾ ಹಬ್ಬವನ್ನು ಜ. 3ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದೆ.

ಕ್ರೀಡಾ ಹಬ್ಬವು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾಧ್ಯಕ್ಷ ಬಸವರಾಜ ಬಳ್ಳಾರಿ ನೇತೃತ್ವದಲ್ಲಿ ನಡೆಯುತ್ತಿರುವುದು ಶ್ಲಾಘನೀಯ. ವಿವಿಧ ಇಲಾಖೆಯ ರಾಜ್ಯ ಸರ್ಕಾರಿ ನೌಕರರು, ಆರೋಗ್ಯ ಇಲಾಖೆಯ ಅಧಿಕಾರಿಗಳು ಮತ್ತು ವಿವಿಧ ವೃಂದದ ನೌಕರರು ಕುಟುಂಬ ಸಮೇತ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾ ಶಾಖೆಯ ಕಾಯಾಧ್ಯಕ್ಷ ಸಿದ್ದಪ್ಪ ಎನ್.ಲಿಂಗದಾಳ, ಜಿಲ್ಲಾ ಉಪಾಧ್ಯಕ್ಷ ಅಜಯಕುಮಾರ ಕಲಾಲ, ನಿರ್ದೇಶಕರಾದ ವಾಯ್.ಎನ್. ಕಡೇಮನಿ, ಸರೋಜಾ ಕಟ್ಟಿಮನಿ ಪತ್ರಿಕಾ ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ.

# ಬೆಳೆ ವಿವರಗಳನ್ನು ದಾಖಲಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

2025-26ನೇ ಸಾಲಿನ ಹಿಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಈಗಾಗಲೇ ಪ್ರಾರಂಭವಾಗಿದ್ದು, ರೈತರು ತಾವು ಬೆಳೆದ ಬೆಳೆಗಳ ವಿವರಗಳನ್ನು ತಾವೇ ಖುದ್ದಾಗಿ ಗೂಗಲ್ ಪ್ಲೇಸ್ಟೋರ್‌ನಿಂದ 'ಹಿಂಗಾರು ರೈತರ ಬೆಳೆ ಸಮೀಕ್ಷೆ 2025'ನ್ನು ಡೌನ್‌ಲೋಡ್ ಮಾಡಿಕೊಂಡು ಬೆಳೆ ವಿವರಗಳನ್ನು ದಾಖಲಿಸಬೇಕಾಗಿದೆ.

ಹೀಗೆ ವಿವರಗಳನ್ನು ದಾಖಲಿಸುವದರಿಂದ ರೈತರಿಗೆ ಕನಿಷ್ಠ ಬೆಂಬಲ ಬೆಲೆ ಯೋಜನೆ, ಬೆಳೆ ವಿಮೆ ಯೋಜನೆ, ಬರಗಾಲ ಮತ್ತು ಪ್ರವಾಹ ಸಂದರ್ಭದಲ್ಲಿ ನಷ್ಟ ಪರಿಹಾರ ಪಡೆಯಲು, ಪಹಣಿಯಲ್ಲಿ ಬೆಳೆ ವಿವರಗಳನ್ನು ದಾಖಲಿಸಲು ಮತ್ತು ಬೆಳೆಸಾಲ ಪಡೆಯುವಲ್ಲಿ ರೈತರಿಗೆ ಅನುಕೂಲವಾಗುವದರಿಂದ ಎಲ್ಲ ರೈತರು ಬೆಳೆ ವಿವರಗಳನ್ನು ತ್ವರಿತವಾಗಿ ಬೆಳೆ ಸಮೀಕ್ಷೆ ಆ್ಯಪ್‌ನಲ್ಲಿ ದಾಖಲಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕಿದೆ. ರೈತರು ಬೆಳೆ ವಿವರಗಳನ್ನು ಅಪ್‌ಲೋಡ್ ಮಾಡದಿದ್ದಲ್ಲಿ ಮೇಲೆ ತಿಳಿಸಿದ ಸರ್ಕಾರದ ಯೋಜನೆಗಳ ಲಾಭದಿಂದ ವಂಚಿತರಾಗುವ ಸಾಧ್ಯತೆ ಇರುವುದರಿಂದ ರೈತರು ಇದನ್ನು ಗಂಭೀರವಾಗಿ ಪರಿಗಣಿಸಿ ತುರ್ತಾಗಿ ವಿವರಗಳನ್ನು ದಾಖಲಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ರೈತರು ತಮ್ಮ ಗ್ರಾಮದ ಖಾಸಗಿ ನಿವಾಸಿಗಳು, ಕಂದಾಯ/ಕೃಷಿ / ತೋಟಗಾರಿಕೆ /ರೇಷ್ಮೆ ಇಲಾಖೆಗಳ ಅಧಿಕಾರಿಗಳನ್ನು ಸಂಪರ್ಕಿಸಬಹುದು ಹಾಗೂ ಸಹಾಯವಾಣಿ ಕೇಂದ್ರದ ದೂರವಾಣಿ ಸಂಖ್ಯೆ-1800 425 3553ಗೆ ಕರೆ ಮಾಡಲು ಜಂಟಿ ಕೃಷಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

# ಮಹಾತ್ಮರ ಜೀವನ ಚರಿತ್ರೆಯನ್ನು ಅರಿಯಿರಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಂತರು, ಶರಣರು, ಮಹಾತ್ಮರ ಜೀವನ ಚರಿತ್ರೆ ಬದುಕಿಗೆ ದಾರಿದೀಪವಾಗಿದ್ದು, ಅವರ ಜೀವನ ವೃತ್ತಾಂತಗಳ ಪುರಾಣ-ಪ್ರವಚನಗಳನ್ನು ಶ್ರವಣ ಮಾಡುವ ಮೂಲಕ ಮನಸ್ಸಿನ ದುಃಖ-ದುಮ್ಮಾನಗಳು ಕಳೆದು ಮನಃಶಾಂತಿ, ನಿರ್ಮಲ ಶುದ್ಧ-ಪ್ರಸನ್ನಚಿತ್ತ ಮನಸ್ಸನ್ನು ನಮ್ಮದಾಗಿಸಿಕೊಳ್ಳಲು ಸಾಧ್ಯ ಎಂದು ಹೂವಿನಶಿಗ್ಲಿಯ ಶ್ರೀ ಚನ್ನವೀರಮಹಾಸ್ವಾಮಿಗಳು ಹೇಳಿದರು.

ಅವರು ಗುರುವಾರ ಶ್ರೀಮಠದ 47ನೇ ಜಾತ್ರಾ ಮಹೋತ್ಸವ ಮತ್ತು ಲಿಂ. ನಿರಂಜನ ಶ್ರೀಗಳ ಪುಣ್ಯಾರಾಧನೆ ಅಂಗವಾಗಿ ಶ್ರೀ ಕೊಟ್ಟೂರು ಬಸವೇಶ್ವರ ಪುರಾಣ ಪ್ರವಚನ ಪ್ರಾರಂಭೋತ್ಸವದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಸಂತರ, ಶರಣರ, ಮಹಾತ್ಮರ ಚಿಂತನ-ಮಂಥನಗಳ ಸತ್ಸಂಗ ಕಾರ್ಯಕ್ರಮಗಳು ಜನರ ಮನಸ್ಸನ್ನು ಕಟ್ಟಿ ಸುಸಂಸ್ಕೃತ ಸಮಾಜ ನಿರ್ಮಾಣಕ್ಕೆ ಸಹಾಯಕಾರಿಯಾಗಿವೆ. ಅಂತರಂಗದಲ್ಲಿ ಪ್ರೀತಿ, ದಯೆ, ಕರುಣೆ, ದಾನ, ಧರ್ಮ, ಸಂಸ್ಕಾರ, ಮಾನವೀಯ ಮೌಲ್ಯಗಳು ಒಡಮೂಡಲು ಮಹಾತ್ಮರ ಜೀವನ ಚರಿತ್ರೆಯನ್ನು ಅರಿಯಬೇಕು. ಶ್ರೇಷ್ಠರಾದ ಮುಳುಗುಂದದ ಶ್ರೀ ಬಾಲಲೀಲಾ ಮಹಾಂತ ಶಿವಯೋಗಿಗಳ ಚರಿತ್ರೆ ಸನ್ಮಾರ್ಗದ ದೀವಿಗೆಯಾಗಿದ್ದು, ಈ ಪುರಾಣ ಕಾರ್ಯದಲ್ಲಿ ಪಾಲ್ಗೊಂಡು ಕೆಲ ತತ್ವ ವಿಚಾರಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಜ. 1ರಿಂದ ಪ್ರಾರಂಭಗೊಂಡಿರುವ ಪುರಾಣ ಪ್ರವಚನ ಕಾರ್ಯಕ್ರಮ ಜ. 13ರವರೆಗೆ ನಿತ್ಯ ಸಂಜೆ ಶ್ರೀಮಠದಲ್ಲಿ ನೆರವೇರಲಿದೆ.

ಪ್ರವಚನಕಾರರಾಗಿ ರಾಚಯ್ಯ ಶಾಸ್ತ್ರಿಗಳು ಹಿರೇಮಠ, ನಿಂಗಯ್ಯ ಸ್ವಾಮಿ ಹಿರೇಮಠ ಮತ್ತು ಶಿವಕುಮಾರ ಸಂಗೀತ ಸೇವೆ ನೀಡುವರು. ಪುರಾಣ ಕಾರ್ಯಕ್ರಮದಲ್ಲಿ ಹೂವಿನಶಿಗ್ಲಿ ಸುತ್ತಮುತ್ತಲ ಗ್ರಾಮಗಳ ಭಕ್ತರು ಪಾಲ್ಗೊಳ್ಳುತ್ತಿದ್ದಾರೆ.

ಈ ವೇಳೆ ಗ್ರಾ.ಪಂ ಅಧ್ಯಕ್ಷೆ ಲಕ್ಷ್ಮವ್ವ ಗಡ್ಡೆಣ್ಣವರ, ಉಪಾಧ್ಯಕ್ಷೆ ಚೈತ್ರಾ ಅತ್ತಿಗೇರಿ ಸೇರಿ ಸರ್ವ ಸದಸ್ಯರು, ಮಾಂತೇಶ ಹುಲ್ಲೂರ, ಶ್ರೀಮಠದ ಭಕ್ತರು ಇದ್ದರು.

**2025ರಲ್ಲಿ ಮುದ್ರಿಸಿ ಪ್ರಕಟಿಸಿದ ಮೊದಲ ಆವೃತ್ತಿಯ ಪುಸ್ತಕಗಳ ಆಹ್ವಾನ**

# ಪುಸ್ತಕಗಳ ನೋಂದಣಿಗೆ ಅವಕಾಶ

**■ವಿಜಯಸಾಕ್ಷಿ ಸುದ್ದಿ, ಗದಗ**

ಪುಸ್ತಕಗಳ ನೋಂದಣಿ ಕಾಯ್ದೆ ಅನ್ವಯ ಪ್ರಕಾಶಕರು 2025ರಲ್ಲಿ ಮುದ್ರಿಸಿ ಪ್ರಕಟಿಸಿದ ಮೊದಲ ಆವೃತ್ತಿಯ ಪುಸ್ತಕಗಳ 3 ಪ್ರತಿಗಳನ್ನು ರಾಜ್ಯ ಕೇಂದ್ರ ಗ್ರಂಥಾಲಯ ಬೆಂಗಳೂರು ಇಲ್ಲಿಗೆ ಸಲ್ಲಿಸಬೇಕು. ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯು ಆಯ್ಕೆಗಾಗಿ ಸಲ್ಲಿಸಲಾದ 3 ಪ್ರತಿಗಳಲ್ಲಿ ಒಂದನ್ನು ಪರಿಗಣಿಸಲಾಗುತ್ತದೆ.

2025ರಲ್ಲಿ ರಾಜ್ಯದಲ್ಲಿ ಪ್ರಥಮ ಮುದ್ರಣಗೊಂಡು ಪ್ರಕಟಗೊಳ್ಳುವ ಯಾವುದೇ ಭಾಷೆಯ ಪುಸ್ತಕಗಳನ್ನು ರಾಜ್ಯ ಕೇಂದ್ರ ಗ್ರಂಥಾಲಯದಲ್ಲಿ ಪ್ರತಿ ಶೀರ್ಷಿಕೆ ಮೂರು ಪ್ರತಿಗಳನ್ನು ಮುಫತ್ತಾಗಿ ಸಲ್ಲಿಸಿ ಜನವರಿ 31ರ ಸಂಜೆ 5.30ರೊಳಗಾಗಿ ನೋಂದಣಿ ಮಾಡಿಸತಕ್ಕದ್ದು. ನೋಂದಣಿಯಾದ ಪುಸ್ತಕಗಳನ್ನು ಮಾತ್ರ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಪರಿಗಣಿಸಲಾಗುವುದು. ಅಂತಿಮ ದಿನಾಂಕದ ನಂತರ ನೋಂದಣಿಯಾಗುವ ಪುಸ್ತಕಗಳನ್ನು ಆಯ್ಕೆಗಾಗಿ ಪರಿಗಣಿಸಲಾಗುವುದಿಲ್ಲ.

ಹೊರ ರಾಜ್ಯಗಳಲ್ಲಿ 2025ರಲ್ಲಿ ಪ್ರಥಮ ಮುದ್ರಣಗೊಂಡು ಪ್ರಕಟವಾಗುವ ಆಂಗ್ಲ, ಹಿಂದಿ ಅಥವಾ ಯಾವುದೇ ಭಾಷೆಯ ಪುಸ್ತಕಗಳನ್ನು ಆಯಾ ರಾಜ್ಯ ಕೇಂದ್ರ ಗ್ರಂಥಾಲಯಗಳಲ್ಲಿ ಅಥವಾ ಕೇಂದ್ರ / ಆಯಾ ರಾಜ್ಯ ಸರ್ಕಾರಗಳಿಂದ ಅಧಿಸೂಚಿಸಲ್ಪಟ್ಟ ಅಧಿಕೃತ ಪುಸ್ತಕ ನೋಂದಣಿ ಕೇಂದ್ರಗಳಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಸಿ, ನೋಂದಣಿ ಪ್ರಮಾಣಪತ್ರದ ನಕಲು ಪ್ರತಿಯೊಂದಿಗೆ ಮತ್ತು ಸದರಿ ಪುಸ್ತಕದ ಒಂದು ಪ್ರತಿಯನ್ನು ಜ. 31ರ ಸಂಜೆ 5.30ರೊಳಗಾಗಿ ಆಯಾ ರಾಜ್ಯ ಕೇಂದ್ರ ಗ್ರಂಥಾಲಯಕ್ಕೆ ಸಲ್ಲಿಸತಕ್ಕದ್ದು.

ಸಾಹಿತ್ಯ, ಮಕ್ಕಳ ಸಾಹಿತ್ಯ, ಕಲೆ ಮತ್ತು ವಿಜ್ಞಾನ ಪ್ರಕಾರಗಳ ಯಾವುದೇ ಭಾಷೆಯ ಪುಸ್ತಕಗಳನ್ನು ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಗೆ ಸಲ್ಲಿಸಬಹುದು. 2025ನೇ ಸಾಲಿನಲ್ಲಿ ಪ್ರಕಟಗೊಂಡ ಪುಸ್ತಕಗಳ ಆಯ್ಕೆಗೆ ಪ್ರತ್ಯೇಕವಾಗಿ ಆಯುಕ್ತರ ಕಛೇರಿಯಲ್ಲಿ ಯಾವುದೇ ಪುಸ್ತಕಗಳನ್ನು ಸ್ವೀಕರಿಲಾಗುವುದಿಲ್ಲ. ಪುಸ್ತಕಗಳನ್ನು ಸಲ್ಲಿಸಲು ಇಚ್ಛಿಸುವ ಲೇಖಕರು, ಲೇಖಕ-ಪ್ರಕಾಶಕರು ಮತ್ತು ಪ್ರಕಟಣಾ ಸಂಸ್ಥೆಯವರು ನಿಗದಿತ ಅವಧಿಯೊಳಗೆ ರಾಜ್ಯ ಕೇಂದ್ರ ಗ್ರಂಥಾಲಯಾದಲ್ಲಿ ಪುಸ್ತಕಗಳ ನೋಂದಣಿ ಅಧಿನಿಯಮದಡಿ ನಿಯಮಾನುಸಾರ ಪುಸ್ತಕಗಳನ್ನು ಸಲ್ಲಿಸತಕ್ಕದ್ದು.

ನೋಂದಣಿಗಾಗಿ ನಿಗದಿತ ಅರ್ಜಿ ನಮೂನೆ ಹಾಗೂ ಮಾಹಿತಿಗಾಗಿ ಇಲಾಖಾ ಅಂತರ್ಜಾಲ dpl. karnataka.gov.in ಮತ್ತು ರಾಜ್ಯದ ಎಲ್ಲಾ ಜಿಲ್ಲಾ/ನಗರ ಕೇಂದ್ರ ಗ್ರಂಥಾಲಯಗಳ ಉಪನಿರ್ದೇಶಕರು/ ಮುಖ್ಯ ಗ್ರಂಥಾಲಯಾಧಿಕಾರಿಗಳ ಕಛೇರಿಗಳಲ್ಲಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಆಯುಕ್ತರ ಕಛೇರಿ ದೂರವಾಣಿ ಸಂಖ್ಯೆ-080-22864990, 22867358 ಮತ್ತು ರಾಜ್ಯ ಕೇಂದ್ರ ಗ್ರಂಥಾಲಯದ ದೂರವಾಣಿ ಸಂಖ್ಯೆ-080-22212128 ಸಂಪರ್ಕಿಸಬಹುದಾಗಿದೆ ಎಂದು ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಯಲ್ ಕರಾಟೆ ಕ್ಲಬ್ ಕ್ರೀಡಾಪಟುಗಳ ಸಾಧನೆ



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಕಳಸಾಪುರ ರಸ್ತೆಯಲ್ಲಿರುವ ಜಿಲ್ಲಾ ಒಳಾಂಗಣ ಕ್ರೀಡಾಂಗಣದಲ್ಲಿ ಇತ್ತೀಚೆಗೆ ನಡೆದ 4ನೇ ರಾಷ್ಟ್ರ ಮಟ್ಟದ ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ರಾಯಲ್ ಕರಾಟೆ ಕ್ಲಬ್ ಹಾಗೂ ಶ್ರೀ ರಾಜೇಶ್ವರಿ ವಿದ್ಯಾ ನಿಕೇತನ ಶಾಲೆಯ ಕ್ರೀಡಾಪಟುಗಳಾದ ಅನನ್ಯ ಆರೇರ ಕಟಾ ವಿಭಾಗದಲ್ಲಿ ಪ್ರಥಮ, ವಿಹಾನ ವಗ್ಗನವರ-ಪ್ರಥಮ, ಲಿಂಗರಾಜ ಹಾಳಕೇರಿ ತೃತೀಯ, ವರುಣ ಜಿನಗಿ ಕುಮಟೆ ಹಾಗೂ ಕಟಾ ವಿಭಾಗದಲ್ಲಿ ತೃತೀಯ ಹಾಗೂ ಭರತ್ ಇರಾಳ್ ಸಮಾಧಾನಕರ ಪ್ರಶಸ್ತಿ ಪಡೆದಿದ್ದಾರೆ.

ಸಾಧಕ ವಿದ್ಯಾರ್ಥಿಗಳಿಗೆ, ತರಬೇತುದಾರ ಸುಲೇಮಾನ ದೊಡ್ಡಮನಿ ಅವರನ್ನು ಶ್ರೀ ರಾಜೇಶ್ವರಿ ವಿದ್ಯಾನಿಕೇತನ ಶಾಲೆಯ ಆಡಳಿತ ಮಂಡಳಿ, ಮುಖ್ಯೋಪಾಧ್ಯಾಯರು ಹಾಗೂ ಪಾಲಕರು ಅಭಿನಂದಿಸಿದ್ದಾರೆ.

# ಕೋಗಿಲು ಬಡಾವಣೆ ಮನೆಗಳ ತೆರವು : ಸರ್ಕಾರದ ಕ್ರಮ ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಬೆಂಗಳೂರಿನ ಕೋಗಿಲು ಬಡಾವಣೆಯ ವಾಸಿಂ ಹಾಗೂ ಫಕೀರ್ ಕಾಲೊನಿಗಳ ಸುಮಾರು 300 ಮನೆಗಳನ್ನು ನೆಲಸಮ ಮಾಡಿ, ಮೂರು ಸಾವಿರಕ್ಕೂ ಹೆಚ್ಚು ಜನರನ್ನು ಬೀದಿಗೆ ತಳ್ಳಿರುವ ರಾಜ್ಯ ಸರ್ಕಾರದ ಕ್ರಮ ಪ್ರಶ್ನಿಸಿ ಹೈಕೋರ್ಟ್‌ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ (ಪಿಐಎಲ್) ಸಲ್ಲಿಸಲಾಗಿದೆ. ಕೋಗಿಲು ಬಡಾವಣೆ ನಿವಾಸಿಗಳಾದ ಝೈಬಾ ತಬಸ್ಸುಮ್, ರೆಹನಾ ಮತ್ತು ಆರೀಫ್ ಬೇಗಂ ಅರ್ಜಿ ಸಲ್ಲಿಸಿದ್ದು, ರಾಜ್ಯ ಸರ್ಕಾರ, ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಪೊಲೀಸ್ ಆಯುಕ್ತರು ಮತ್ತು ಬೆಂಗಳೂರು ಉತ್ತರ ತಾಲ್ಲೂಕು ತಹಸೀಲ್ದಾರ್ ಅವರನ್ನು ಪ್ರತಿವಾದಿಗಳನ್ನಾಗಿ ಮಾಡಲಾಗಿದೆ ಎಂದು ಬಾರ್ & ಬೆಂಚ್ ವರದಿ ಮಾಡಿದೆ.

ಮನೆಗಳನ್ನು ಕೆಡವುದಕ್ಕೂ ಮುನ್ನ ನೋಟಿಸ್ ನೀಡಿಲ್ಲ. ನಮ್ಮ ಅಹವಾಲು ಆಲಿಸಿಲ್ಲ. ನಿರಾಶ್ರಿತರಾದ ಬಹುತೇಕರು ತಮ್ಮ ಮನೆಗಳಿಗೆ ಸಂಬಂಧಿಸಿದಂತೆ ದಾಖಲೆ ಇಟ್ಟುಕೊಂಡಿದ್ದಾರೆ ಎಂದು ಅರ್ಜಿಯಲ್ಲಿ ಹೇಳಲಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka